ವಿಜಯಪುರ | ಸಂಪುಟ 04 | ಸಂಚಿಕೆ 095 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ


ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com

RNI NO: KARKAN/2023/86203

ಮಂಗಳವಾರ, ಜೂನ್, 02, 2026



"ಕೆಟ್ಟುಹೋದ ಲಾರಿಯಂತಿರುವ ಸರ್ಕಾರವನ್ನು ನಡೆಸಲು ಸಾಧ್ಯವಾಗದೇ ಸಿದ್ದರಾಮಯ್ಯ ಅವರು ಮೌನವಾಗಿ ರಾಜೀನಾಮೆ ಕೊಟ್ಟು ಹೋಗಿದ್ದಾರೆ. ಇನ್ನು ಮುಂದೆ ಡಿ.ಕೆ.ಶಿವಕುಮಾರ್ ಎಲ್ಲ ಬಾಕಿಗಳನ್ನು ತೀರಿಸಬೇಕಿದೆ. ಇದಕ್ಕಾಗಿ ಇನ್ನಷ್ಟು ತೆರಿಗೆಗಳನ್ನು ಅವರು ಜನರ ಮೇಲೆ ಹೇರುತ್ತಾರೆ."

■ ಆರ್.ಅಶೋಕ
ಪ್ರತಿಪಕ್ಷ ನಾಯಕರು

# ಡಾ.ಮಹಾದೇವಪ್ಪ ಸಂಪುಟಕ್ಕೆ ಸೇರ್ಪಡೆಗೊಳಿಸಲು ಡಿಎಸ್ಎಸ್ ಆಗ್ರಹ




■ ಉದಯರಶ್ಮಿ ದಿನಪತ್ರಿಕೆ

ಅಥಣಿ: ಜೂನ್ 3 ರಂದು ರಚನೆಯಾಗಲಿರುವ ಡಿ.ಕೆ. ಶಿವಕುಮಾರ ನೇತೃತ್ವದ ಕಾಂಗ್ರೆಸ್ ಸರ್ಕಾರದ ಸಂಪುಟದಲ್ಲಿ ಮಾಜಿ ಸಚಿವ ಡಾ. ಎಚ್.ಸಿ. ಮಹಾದೇವಪ್ಪ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಒತ್ತಾಯಿಸಿದೆ.

ಡಾ. ಡಿ.ಜಿ. ಸಾಗರ ಅವರ ಆದೇಶದ ಮೇರೆಗೆ ಸೋಮವಾರ ಅಥಣಿ ನಗರದ ಜತ್ತ ರಸ್ತೆಯ ಜ್ಯೋತಿಭಾ ಫುಲೆ ವೃತ್ತದಲ್ಲಿ ದಸಂಸ ಜಿಲ್ಲಾ ಸಂಚಾಲಕ ಶ್ರೀಕಾಂತ ತಳವಾರ ಹಾಗೂ ಸಂಜಯ ತಳವಲಕರ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಯಿತು.

ಈ ವೇಳೆ ಜಿಲ್ಲಾ ಸಂಚಾಲಕ ಶ್ರೀಕಾಂತ ತಳವಾರ ಮಾತನಾಡಿ ಸಿದ್ದರಾಮಯ್ಯ ನೇತೃತ್ವದ ಹಿಂದಿನ ಸರ್ಕಾರದಲ್ಲಿ ಡಾ. ಎಚ್.ಸಿ. ಮಹಾದೇವಪ್ಪ ಅವರು ಸಮಾಜ ಕಲ್ಯಾಣ ಸಚಿವರಾಗಿ ಅತ್ಯುತ್ತಮ ಕೆಲಸ ಮಾಡಿದ್ದಾರೆ ದಲಿತ ಹಿಂದುಳಿದ ವರ್ಗಗಳ ಪರವಾಗಿ ಹಲವು ಜನಪರ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ ಹೀಗಾಗಿ ಹೊಸ ಸಂಪುಟದಿಂದ ಅವರನ್ನು ಕೈಬಿಡಬಾರದು ಎಂದು ಒತ್ತಾಯಿಸಿದರು.

ದಸಂಸ ಅಥಣಿ ಸಂಚಾಲಕ ರವಿ ಕಾಂಬಳೆ ಮಾತನಾಡಿದರು.

ಈ ಸಂದರ್ಭದಲ್ಲಿ ಪಾಂಡುರಂಗ ಕಾಂಬಳೆ, ಸಂತೋಷ ಗಸ್ತಿ, ರಮೇಶ ತಳಕೇರಿ, ದತ್ತು ಕಾಂಬಳೆ, ತುಕಾರಾಮ ಭಜಂತ್ರಿ ನೀಲಕಂಠ ಕಾಂಬಳೆ, ಮಹಾದೇವ ಮಾದರ, ಬಸವರಾಜ ಮಾದರ, ಅಶೋಕ ಚೌಗಲಾ, ಮಂಜುನಾಥ ಪಟ್ಟಣ, ಸಂಜು ಗಸ್ತಿ, ಅಲಿಯಾ ಸನದಿ, ಲಕ್ಕಪ್ಪ ಕಾಂಬಳೆ, ಮುತ್ತುರಾಜ ಹರಿಜನ, ಅಜಯ ಮರಡಿ, ಮಹೇಶ ಮರಡಿ, ಬೀರಪ್ಪ ಕಾಂಬಳೆ, ರವಿ ಸಿಂಗೆ, ಶಂಕರ ಕಾಂಬಳೆ ಸೇರಿದಂತೆ ಸಂಘಟನೆಯ ಹಲವು ಮುಖಂಡರು ಭಾಗವಹಿಸಿದ್ದರು.

# ಸರ್ಕಾರಿ ಶಾಲೆಗೆ ಮಕ್ಕಳನ್ನು ಸೇರಿಸಿ : ಶಿವಲೀಲಾ



■ ಉದಯರಶ್ಮಿ ದಿನಪತ್ರಿಕೆ

ಅಥಣಿ: ಸರ್ಕಾರಿ ಶಾಲೆಗೆ ನಮ್ಮ ಮಕ್ಕಳನ್ನು ಸೇರಿಸುವುದು ನಮ್ಮ ಜವಾಬ್ದಾರಿ ಎಂಬ ಧ್ಯೇಯದೊಂದಿಗೆ ಎಲ್ಲ ಪಾಲಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ಸೇರಿಸಬೇಕು ಎಂದು ಪುರಸಭೆ ಅಧ್ಯಕ್ಷ ಶಿವಲೀಲಾ ಬುಟಾಳಿ ಹೇಳಿದರು.

ಅವರು ಪಟ್ಟಣದ ವಿಕ್ರಮಪೂರ ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಮತ್ತು ಉನ್ನತೀಕರಿಸಿದ ಪ್ರೌಢಶಾಲೆಯಲ್ಲಿ ಸೋಮವಾರ ಹಮ್ಮಿಕೊಂಡ 2026-27ನೇ ಸಾಲಿನ ಶಾಲಾ ಪ್ರಾರಂಭೋತ್ಸವ ಮತ್ತು ದಾಖಲಾತಿ ಆಂದೋಲನ ಕಾರ್ಯಕ್ರಮದಲ್ಲಿ ಮಾತನಾಡಿ,

ಈ ಶಾಲೆಯಲ್ಲಿ ಎಲ್ ಕೆಜಿ, ಯುಕೆಜಿ, ಯಿಂದ ಇಂಗ್ಲಿಷ್ ಮತ್ತು ಕನ್ನಡ ಭಾಷೆಯಲ್ಲಿದ್ದು 5 ನೇ ತರಗತಿಯಿಂದ ಇಂಗ್ಲಿಷ್ ಭಾಷೆಯಲ್ಲಿದ್ದು ಅದೇ ರೀತಿ 1ನೇ ತರಗತಿಯಿಂದ 10ನೇ ತರಗತಿವರೆಗೆ ಕನ್ನಡ ಬೋಧನೆ ಇದ್ದು ಸುಸಜ್ಜಿತ ವಿಜ್ಞಾನ ಪ್ರಯೋಗಾಲಯ ಗ್ರಂಥಾಲಯ ಉಚಿತ ಆರೋಗ್ಯ ಸೇವೆ ಉಚಿತ ಪಠ್ಯಪುಸ್ತಕ ಸಮವಸ್ತ್ರ ಊಟದ ವ್ಯವಸ್ಥೆ ಕಲ್ಪಿಸಲಾಗಿದೆ ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಎಮ್ ಆರ್ ಮುಂಜೆ ಮಾತನಾಡಿ, ಸರ್ಕಾರಿ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದ್ದು ಪ್ರತಿ ತಿಂಗಳು ಪಾಲಕ ಹಾಗೂ ಶಿಕ್ಷಕರ ಸಭೆ ಮಕ್ಕಳ ಕಲಿಕಾ ಪ್ರಗತಿಯ ನಿರಂತರ ಮೌಲ್ಯಮಾಪನ ಎಸ್ ಡಿ ಎಂ ಸಿ ಸಭೆ ಆಯೋಜಿಸಲಾಗುತ್ತಿದ್ದು ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ಪ್ರಾಜೆಕ್ಟ್ ಆಧಾರಿತ ಕಲಿಕೆ ಹಾಗೂ ಸಾಂಸ್ಕೃತಿಕ ಕ್ರೀಡಾ ಚಟುವಟಿಕೆಗಳಿಗೆ ವಿಶೇಷ ಒತ್ತು ನೀಡಲಾಗುವುದು ಎಂದು ಹೇಳಿದರು.

ಎಸ್ ಡಿಎಂಸಿ ಅಧ್ಯಕ್ಷ ರಾಕೇಶ ಮೈಗೂರ ಹಾಗೂ ಪುರಸಭೆ ಉಪಾಧ್ಯಕ್ಷ ಭುವನೇಶ್ವರಿ ಯಕ್ಕಂಚಿ ಮಾತನಾಡಿದರು.

ಈ ಸಂದರ್ಭದಲ್ಲಿ ಪುರಸಭೆ ಸದಸ್ಯರಾದ ರಾಜಶೇಖರ ಗುಡೊಡಗಿ,ರಿಯಾಜ್ ಸನದಿ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಶಿವಾನಂದ ಕಲ್ಲಾಪೂರ, ಕ್ಷೇತ್ರ ಸಮನ್ವಯಾಧಿಕಾರಿ ಗೌಡಪ್ಪ ಖೋತ,ಬಿಸಿ ಊಟ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ ನಾಮದಾರ, ಶಾಲೆಯ ಮುಖ್ಯೋಪಾಧ್ಯಾಯ ಡಿ ಸ್ ಬಸರಗಿ,ಶಿಕ್ಷಕರಾದ ಡಿ ಎಸ್ ಗುಡದಿನ್ನಿ,ವಿ ಎಸ್ ವಾಘಮೊಡೆ,ಡಿ ಎ ಬರಡಗಿ, ಎಸ್ ಎಸ್ ಮುಗಳಖೋಡ,ಜಿ ಎನ್ ಕುಂಬಾರ,ಎಫಎಮ್ ಖೋರ್ಬು, ಲಕ್ಷ್ಮಿ ನೀಡೊಣಿ,

ಎಸ್ ಡಿ ಎಮ್ ಸಿ ಸದಸ್ಯರಾದ ರಿಯಾಜ್ ಸನದಿ, ನಾಗವ್ವ ಸುರವಿ,ಬಿ ಬಿ ಆಯಿಶಾ ಮಮದಾಪೂರ, ರೇಣುಕಾ ಬಿರಡಿ, ಸೇರಿದಂತೆ ಪಾಲಕರು ವಿದ್ಯಾರ್ಥಿಗಳು ಭಾಗವಹಿಸಿದರು.

# ಚಿಮ್ಮಡದಲ್ಲಿ ಪ್ರತಿಭಾ ಪರೀಕ್ಷೆ ಬರೆದ ವಿದ್ಯಾರ್ಥಿಗಳು



■ ಉದಯರಶ್ಮಿ ದಿನಪತ್ರಿಕೆ

ಚಿಮ್ಮಡ: ಗ್ರಾಮದಲ್ಲಿ ಭೂಮಿಕಾ ವಿದ್ಯಾಸಂಸ್ಥೆಯಿಂದ ರವಿವಾರ ಆಯೋಜಿಸಲಾಗಿದ್ದ ಪ್ರತಿಭಾ ಪರೀಕ್ಷೆಯಲ್ಲಿ ಸುಮಾರು ಎರಡು ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳು ಪರೀಕ್ಷೆ ಬರೆದು ತಮ್ಮ ಪ್ರತಿಭೆ ಪ್ರದರ್ಶಿಸಿದರು.

ಭೂಮಿಕಾ ರೆಸಿಡೆನ್ಸಿಯಲ್ ಸ್ಕೂಲ್‌ನ ಆವರಣದಲ್ಲಿ ಮೂರರಿಂದ ಹತ್ತನೇ ತರಗತಿಯ ಕನ್ನಡ ಹಾಗೂ ಇಂಗ್ಲಿಷ್ ಮಾಧ್ಯಮದ ವಿದ್ಯಾರ್ಥಿಗಳಿಗಾಗಿ ಹಮ್ಮಿಕೊಳ್ಳಲಾಗಿದ್ದ ಈ ಪ್ರತಿಭಾ ಪರೀಕ್ಷೆಯಲ್ಲಿ ಭಾಗವಹಿಸಿ ಪ್ರಥಮಸ್ಥಾನ ಪಡೆದ ಪ್ರತೀ ತರಗತಿಯ ವಿದ್ಯಾರ್ಥಿಗಳಿಗೆ ತೇರದಾಳ ಮತಕ್ಷೇತ್ರದ ಕಾಂಗ್ರೆಸ್ ಧುರೀಣ ಸಿದ್ದು ಕೊಣ್ಣೂರರಿಂದ ಉಚಿತ ಸೈಕಲ್ ಹಾಗೂ ಉತ್ತಮ ಅಂಕಗಳೊಂದಿಗೆ ತೇರ್ಗಡೆ ಹೊಂದಿದ ಪ್ರತೀ ತರಗತಿಯ ತಲಾ ಹತ್ತು ವಿದ್ಯಾರ್ಥಿಗಳಿಗೆ ಒಟ್ಟು ಮೂವತ್ತೆರಡು ಲಕ್ಷ ಐವತ್ತು ಸಾವಿರ ರೂ.ಗಳ ಬಹುಮಾನ ಹಾಗೂ ಶಿಷ್ಯವೇತನ ನೀಡಲಾಗುವುದೆಂದು ಸಂಸ್ಥೆಯ ಸಂಸ್ಥಾಪಕ ಮುತ್ತು ಢವಳೇಶ್ವರ ಘೋಷಿಸಿದರು.

ಇದೇ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡ ಸಿದ್ದು ಕೊಣ್ಣೂರ ಧರ್ಮಪತ್ನಿ ಕವಿತಾ ಸಿದ್ದು ಕೊಣ್ಣೂರ ವಿದ್ಯಾರ್ಥಿಗಳಿಗೆ ಉಚಿತವಾಗಿ ವಿತರಿಸಲಾಗುವ ಸೈಕಲ್‌ಗಳನ್ನು ಅನಾವರಣಗೊಳಿಸಿದರು.

# ಆರ್‌ಸಿಬಿ ಅಭಿಮಾನಿಗಳ 75 ವಾಹನಗಳು ಪೊಲೀಸರ ವಶಕ್ಕೆ!

## ಬೆಂಗಳೂರಿನಲ್ಲಿ ಐಪಿಎಲ್ ಫೈನಲ್ ವಿಜಯದ ಸಂಭ್ರಮಾಚರಣೆ ಮಾಡುತ್ತಿದ್ದ ಆರ್‌ಸಿಬಿ ಅಭಿಮಾನಿಗಳಿಗೆ ಶಾಕ್!

ಬೆಂಗಳೂರು: ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ತಂಡವು ಐಪಿಎಲ್ 2026ರ ಪ್ರಶಸ್ತಿ ಗೆದ್ದ ಬಳಿಕ ನಗರಾದ್ಯಂತ ಅಭಿಮಾನಿಗಳು ಭರ್ಜರಿ ಆಚರಣೆ ನಡೆಸಿದ ವೇಳೆ, ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳಲ್ಲಿ ಬೆಂಗಳೂರು ಸಂಚಾರ ಪೊಲೀಸರು ಬರೊಬ್ಬರಿ 75 ವಾಹನಗಳನ್ನು ವಶಪಡಿಸಿಕೊಂಡಿದ್ದಾರೆ.

ಭಾನುವಾರ ರಾತ್ರಿ ಗುಜರಾತ್ ಟೈಟನ್ಸ್ ವಿರುದ್ಧದ ಫೈನಲ್ ಪಂದ್ಯದಲ್ಲಿ ಆರ್‌ಸಿಬಿ ಜಯ ಸಾಧಿಸಿದ ತಕ್ಷಣ ಸಾವಿರಾರು ಅಭಿಮಾನಿಗಳು ನಗರದ ರಸ್ತೆಗಳಿಗೆ ಇಳಿದು ಸಂಭ್ರಮಾಚರಣೆ ನಡೆಸಿದರು. ಎಂ. ಚಿನ್ನಸ್ವಾಮಿ ಕ್ರೀಡಾಂಗಣದ ಸುತ್ತಮುತ್ತ, ಎಂ.ಜಿ. ರಸ್ತೆ, ಬ್ರಿಗೇಡ್ ರಸ್ತೆ, ಇಂದಿರಾನಗರ, ಕೋರಮಂಗಲ, ಜಯನಗರ, ರಾಜಾಜಿನಗರ ಸೇರಿದಂತೆ ನಗರದ ಹಲವು ಪ್ರಮುಖ ಪ್ರದೇಶಗಳಲ್ಲಿ ಅಭಿಮಾನಿಗಳ ಸಂಭ್ರಮ ಮುಗಿಲು ಮುಟ್ಟಿತ್ತು.



ಆದರೆ ಈ ಸಂಭ್ರಮದ ನಡುವೆ ಅನೇಕರು ಸಂಚಾರ ನಿಯಮಗಳನ್ನು ಉಲ್ಲಂಘಿಸಿದ್ದರಿಂದ ಪೊಲೀಸರು ವಿಶೇಷ ಕಾರ್ಯಾಚರಣೆ ನಡೆಸಿದರು.

ಯಾವುದೇ ಅಹಿತಕರ ಘಟನೆ ನಡೆಯದಂತೆ ತಡೆಯಲು ಹಿರಿಯ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ಪ್ರಮುಖ ಜಂಕ್ಷನ್‌ಗಳು ಮತ್ತು ಗಸ್ತು ಮಾರ್ಗಗಳಲ್ಲಿ ನಿಯೋಜಿಸಲಾಗಿತ್ತು.

ವಾಹನಗಳ ಸಂಚಾರದ ಮೇಲೆ ನಿಗಾ ವಹಿಸಲು ಮತ್ತು ಸಾರ್ವಜನಿಕ ಶಾಂತಿ ಕಾಪಾಡಲು ಆಯಕಟ್ಟಿನ ಸ್ಥಳಗಳಲ್ಲಿ ಚೆಕ್‌ಪೋಸ್ಟ್‌ಗಳನ್ನು (ನಾಕಾ ಪಾಯಿಂಟ್‌ಗಳು) ಸ್ಥಾಪಿಸಲಾಗಿತ್ತು. ಟ್ರಿಪಲ್ ರೈಡಿಂಗ್, ಅಪಾಯಕಾರಿ ವೀಲಿಂಗ್, ನಿರ್ಲಕ್ಷ್ಯ ಚಾಲನೆ, ಅತಿವೇಗ ಹಾಗೂ ಸಾರ್ವಜನಿಕ ಸುರಕ್ಷತೆಗೆ ಧಕ್ಕೆ ಉಂಟುಮಾಡುವ ರೀತಿಯ ವಾಹನ ಚಾಲನೆ ಪ್ರಕರಣಗಳು ದಾಖಲಾಗಿವೆ.

### ನಿಯಮ ಉಲ್ಲಂಘಿ-ಸಿದವರನ್ನು ಗುರುತಿಸಿ ಕ್ರಮ

ಕಳೆದ ಕೆಲವು ವರ್ಷಗಳಿಂದ ದೊಡ್ಡ ಕ್ರೀಡಾ ಪಂದ್ಯಗಳು ಮತ್ತು ಹಬ್ಬದ ಸಂದರ್ಭಗಳಲ್ಲಿ ಅಪಾಯಕಾರಿ ವಾಹನ ಚಾಲನೆ ಹೆಚ್ಚಾಗುತ್ತಿರುವ ಹಿನ್ನಲೆಯಲ್ಲಿ ಬೆಂಗಳೂರು ಪೊಲೀಸರು ಕಟ್ಟುನಿಟ್ಟಿನ ನಿಗಾವಹಿಸುತ್ತಿದ್ದಾರೆ. ಆದಾಗ್ಯೂ, ಕೆಲ ಸಂಚಾರ ನಿಯಮ ಉಲ್ಲಂಘನೆಗಳನ್ನು ಹೊರತುಪಡಿಸಿದರೆ ನಗರದಲ್ಲಿ ಒಟ್ಟಾರೆ ಶಾಂತಿಯುತ ವಾತಾವರಣದಲ್ಲೇ ಸಂಭ್ರಮಾಚರಣೆ ನಡೆದಿದ್ದು, ಆರ್‌ಸಿಬಿ ಸತತ ಎರಡನೇ ಬಾರಿ ಐಪಿಎಲ್ ಟ್ರೋಫಿ ಗೆದ್ದ ಸಂತಸದಲ್ಲಿ ಸಾವಿರಾರು ಅಭಿಮಾನಿಗಳು ಮಧ್ಯರಾತ್ರಿವರೆಗೂ ವಿಜಯೋತ್ಸವದಲ್ಲಿ ತೊಡಗಿದ್ದರು.

ಮುಂದಿನ ದಿನಗಳಲ್ಲಿ ಸಿಸಿಟಿವಿ ದೃಶ್ಯಾವಳಿ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ವಿಡಿಯೊಗಳನ್ನು ಪರಿಶೀಲಿಸಿ ಇನ್ನಷ್ಟು ನಿಯಮ ಉಲ್ಲಂಘಿಸಿದವರನ್ನು ಗುರುತಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ.

# ಗೋವನ್ನು ರಾಷ್ಟ್ರೀಯ ಪ್ರಾಣಿ ಎಂದು ಘೋಷಿಸಲು ಆಗ್ರಹಿಸಿ ಮನವಿ

■ ಉದಯರಶ್ಮಿ ದಿನಪತ್ರಿಕೆ

ಇಂಡಿ: ಗೋವನ್ನು ರಾಷ್ಟ್ರೀಯ ಪ್ರಾಣಿ ಎಂದು ಘೋಷಿಸುವಂತೆ ಕೋರಿ ಸೋಮವಾರ ತಹಶಿಲ್ದಾರ ಬಿ ಎಸ್ ಕಡಕಭಾವಿ ಅವರ ಮುಖಾಂತರ ಸರಕಾರಕ್ಕೆ ಯುವ ಅಲ್ಪಸಂಖ್ಯಾತ ಅಭಿವೃದ್ಧಿ ಸಮಿತಿಯ ಪದಾಧಿಕಾರಿಗಳು ಮನವಿ ಸಲ್ಲಿಸಿದರು .

ಇಂಡಿ ನಗರದ ಟಿಪ್ಪು ಸುಲ್ತಾನ್ ವೃತ್ತದಿಂದ ರ್ಯಾಲಿ ಪ್ರಾರಂಭಿಸಿ ಬಸವೇಶ್ವರ ವೃತ್ತದ ಮೂಲಕ ತಾಲ್ಲೂಕು ಆಡಳಿತ ಸೌಧಕ್ಕೆ ತಲುಪಿ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಯುವ ಅಲ್ಪಸಂಖ್ಯಾತರ ಅಭಿವೃದ್ಧಿ ಸಮಿತಿಯ ಸಂಸ್ಥಾಪಕ ಅಧ್ಯಕ್ಷ ಬಿ ಡಿ ಇನಾಮದಾರ ಮಾತನಾಡಿ, ಭಾರತ ದೇಶವು ವೈವಿಧ್ಯತೆಯಲ್ಲಿ ಏಕತೆಯನ್ನು ಹೊಂದಿರುವ ದೇಶವಾಗಿದೆ. ಇಲ್ಲಿ ಪ್ರತಿಯೊಂದು ಜೀವಿಗೂ, ಪ್ರಕೃತಿಗೂ ತನ್ನದೇ ಆದ ಐತಿಹಾಸಿಕ ಮತ್ತು ಸಾಂಸ್ಕೃತಿಕ ಮಹತ್ವವಿದೆ. ಅದರಲ್ಲಿಯೂ ಮುಖ್ಯವಾಗಿ ಗೋವು (ಹಸು) ಭಾರತೀಯ ಸಂಸ್ಕೃತಿ, ಕೃಷಿ ಪ್ರಧಾನ ಆರ್ಥಿಕತೆ ಮತ್ತು ಕೋಟ್ಯಂತರ ಜನರ ಭಾವನೆಗಳೊಂದಿಗೆ ಅವಿನಾಭಾವ ಸಂಬಂಧವನ್ನು ಹೊಂದಿದೆ. ಗೋವು ಕೇವಲ ಒಂದು ಪ್ರಾಣಿಯಲ್ಲ, ಅದು ದೇಶದ ಗ್ರಾಮೀಣ ಆರ್ಥಿಕತೆಯ ಬೆನ್ನೆಲುಬಾಗಿದೆ. ಶಾಂತಿ, ಕರುಣೆ ಮತ್ತು ಪೋಷಣೆಯ ಸಂಕೇತವಾಗಿರುವ ಹಸುವನ್ನು ಭಾರತದ 'ರಾಷ್ಟ್ರ, ಪ್ರಾಣಿ' ಎಂದು ಘೋಷಿಸುವುದು ಸೂಕ್ತ ಮತ್ತು ಗೌರವದ ವಿಷಯವಾಗಿದೆ. ಇದು ದೇಶದ ಸಾಂಸ್ಕೃತಿಕ ಐಕ್ಯತೆಯನ್ನು ಮತ್ತು ಜೀವ ವೈವಿಧ್ಯತೆಯ ಮೇಲಿರುವ ಗೌರವವನ್ನು ಮತ್ತಷ್ಟು ಎತ್ತಿಹಿಡಿಯುತ್ತದೆ. ಆ ಕಾರಣದಿಂದ ಕೂಡಲೇ ಸರಕಾರ ಗೋವನ್ನು ರಾಷ್ಟ್ರೀಯ ಪ್ರಾಣಿ ಎಂದು ಘೋಷಿಸಬೇಕು ಎಂದು ಒತ್ತಾಯಿಸಿದರು.




ಈ ಸಂದರ್ಭದಲ್ಲಿ ಉಪಾಧ್ಯಕ್ಷ ದಸ್ತಗೀರ್ ಇನಾಮದಾರ, ರಿಯಾಜ್ ಕೋರಬೊ, ಅಬ್ದುಲ್ ಚಂದನವಾಲೆ, ಮಹೇಬೂಬ ಕುಳ್ಳಕುಮಟಗಿ, ಬಿಲಾಲ್ ಡಾಂಗೆ, ಮುಸ್ತಫಾ ಇನಾಮದಾರ, ರಸೂಲ ಮಾಶಾಳಕರ, ದಸ್ತಗೀರ ಗಾಲಿಬವಾಲೆ, ಕಾನೂನು ಸಲಹೆಗಾರ ಎಂ ಬಿ ಮಾಣಿಕ, ಹಿರಿಯ ಮುಖಂಡ ಎಂ ಎಲ್ ದೇವೂರ, ಸಾದಿಕಾ ಕುಳ್ಳಕುಮಟಗಿ, ಗಜಾಲಾ ಮುಂಡೂಡಗಿ, ಶಕೀಲಾ ಗಾಲಿಬವಾಲೆ ನಗರ ಮತ್ತು ಗ್ರಾಮೀಣದ ಭಾಗದ ಸಂಘದ ಎಲ್ಲಾ ಪದಾಧಿಕಾರಿಗಳು ಹಾಜರಿದ್ದರು.

# ರಾಜಕಾರಣಿಗಳ ಜೊತೆ ಪತ್ರಕರ್ತರಿಗೂ ಸಾಮಾಜಿಕ ಜವಾಬ್ದಾರಿ ಇದೆ

## ಕೆಯುಡಬ್ಲ್ಯೂಜೆ ಪ್ರತಿಭಾ ಪುರಸ್ಕಾರದಲ್ಲಿ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅಭಿಮತ

■ ಉದಯರಶ್ಮಿ ದಿನಪತ್ರಿಕೆ

ಬೆಂಗಳೂರು: ರಾಜಕಾರಣಿ ಹಾಗೂ ಅಧಿಕಾರದಲ್ಲಿರುವವರಿಗೆ ಸಾರ್ವಜನಿಕವಾಗಿರುವ ಜವಾಬ್ದಾರಿ ಎಷ್ಟಿದೆಯೋ ಅಷ್ಟೇ ಜವಾಬ್ದಾರಿ ಪತ್ರಕರ್ತರಿಗೂ ಇದೆ. ನಾವು ತೆಗೆದುಕೊಳ್ಳುವ ತೀರ್ಮಾನ ಸಮಾಜದ ಮೇಲೆ ಪರಿಣಾಮ ಬೀರುತ್ತದೆ. ತಾವು ಬರೆಯುವ ವರದಿ ಸಮಾಜದ ಮೇಲೆ ಪರಿಣಾಮ ಬೀರುತ್ತದೆ. ನಮ್ಮ ಬುದ್ದಿವಂತಿಕೆ ಸಮಾಜದ ಒಳಿತಿಗೆ ಬಳಕೆ ಆಗಬೇಕು. ಸಮಾಜದಲ್ಲಿನ ದುಷ್ಕೃತ್ಯ ಮುಚ್ಚುವುದಕ್ಕೆ ಬಳಕೆ ಆಗಬಾರದು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಚಿಕ್ಕಬಳ್ಳಾಪುರದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವತಿಯಿಂದ ಏರ್ಪಡಿಸಿದ್ದ ಪತ್ರಕರ್ತರ ಮಕ್ಕಳ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ದಿಕ್ಸೂಚಿ ಭಾಷಣ ಮಾಡಿದರು.

ಪತ್ರಕರ್ತರ ಮಕ್ಕಳ ಪ್ರತಿಭೆಯನ್ನು ಗುರುತಿಸಿ ಸನ್ಮಾನಿಸುವ ಮೂಲಕ ಪ್ರೋತ್ಸಾಹಿಸುವ ಸದುದ್ದೇಶಿತ ಕೆಲಸವನ್ನು ಮಾಡುತ್ತಿರುವುದು ಅಭಿನಂದನೀಯ ಎಂದರು.

ತಾವು ಸಿಎಂ ಆಗಿದ್ದ ಸಂದರ್ಭದಲ್ಲಿ ಜಾಹಿರಾತುಗಳು ಸೇರಿದಂತೆ ಹಲವು ರೀತಿಯಲ್ಲಿ ಸಹಕಾರ ನೀಡಿದ್ದನ್ನು ಸ್ಮರಿಸಿಕೊಂಡರು.

ಯಾವುದಾದರೂ ಒಂದು ಶಕ್ತಿ ಬೆಳೆಯಬೇಕೆಂದರೆ ಅದನ್ನು ಪ್ರಶ್ನೆ ಮಾಡಲೇಬೇಕು. ನಂಬಿಕೆಗೆ ಯಾವುದೇ ಆಧಾರ ಇಲ್ಲ. ಆದರೆ, ವಿಜ್ಞಾನಕ್ಕೆ ಆಧಾರ ಬೇಕು. ವಿಜ್ಞಾನಕ್ಕೆ ತರ್ಕಬದ್ಧ ಚಿಂತನೆ ಬೇಕಾದರೆ ಹೊಸ ಚಿಂತನೆ ಹುಟ್ಟು ಹಾಕುತ್ತದೆ. ಪ್ರಜಾಪಭುತ್ತದಲ್ಲಿ ಪಶ್ನೆ ಕೇಳುವ ಅಧಿಕಾರ ಕೊಟ್ಟಿರುವುದು ಪತ್ರಕರ್ತರಿಗೆ ನೀವು ಎಷ್ಟು ಅರ್ಥಗರ್ಭವಾದ ಪ್ರಶ್ನೆಗಳನ್ನು ಕೇಳುತ್ತಿರೋ ಅಷ್ಟು ಒಳ್ಳೆಯ ವಿಚಾರಗಳು ಸಮಾಜಕಷ್ಟೇ ಅಲ್ಲದೇ ರಾಜಕಾರಣಕ್ಕೂ ಬರುತ್ತದೆ. ನೀವು ಕೇಳುವ ಪಶ್ನೆ ಸರಳವಾಗಿದ್ದರೆ ಸರಿಯಾದ ಉತ್ತರ ಬರುವುದಿಲ್ಲ. ಪಶ್ನೆ ಕೇಳುವ ಹಕ್ಕು ಪತ್ರಕರ್ತರಿಗಿದೆ ಎಂದರು.



ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಮಾತನಾಡಿ ಪ್ರತಿ ವರ್ಷ ಮಕ್ಕಳ ಪ್ರತಿಭಾ ಪುರಸ್ಕಾರ ಮಾಡಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಮಾಜಿ ಸಚಿವ ಡಾ.ಸುಧಾಕರ್, ಸಂಸದ ಡಾ. ಕೆ. ಸುಧಾಕರ, ಹಂಗಾಮಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್, ಬೆಂಗಳೂರು ಉತ್ತರ ವಿವಿ ಕುಲಪತಿ ಡಾ. ಬಿ.ಕೆ. ರವಿ ಮಾತನಾಡಿದರು.

ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಜಿ.ಪ್ರಭು, ಕೆಯುಡಬ್ಲ್ಯೂಜೆ ಪದಾಧಿಕಾರಿಗಳು, ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್, ಜಿಲ್ಲಾಧ್ಯಕ್ಷ ರವಿಕುಮಾರ್ ಹಿರಿಯ ಪತ್ರಕರ್ತ ಬಿ.ವಿ.ಮಲ್ಲಿಕಾರ್ಜುನಯ್ಯ ಸೇರಿದಂತೆ ಅನೇಕ ಹಿರಿಯ ಪತ್ರಕರ್ತರು ಪಾಲ್ಗೊಂಡಿದ್ದರು.

ಇದೇ ಸಂದರ್ಭದಲ್ಲಿ ರಾಜ್ಯದ ಪತ್ರಕರ್ತರ ಪ್ರತಿಭಾನ್ವಿತ ಮಕ್ಕಳನ್ನು ಸನ್ಮಾನಿಸಲಾಯಿತು.

# ಜೂ.3 ರಂದು ವಿಶ್ವ ಬೈಸಿಕಲ್ ದಿನಾಚರಣೆ: ಸೈಕಲ್ ಜಾಥಾ ಆಯೋಜನೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಇದೇ ಜೂನ್ 3 ರಂದು ವಿಶ್ವ ಬೈಸಿಕಲ್ ದಿನ ಆಚರಣೆ ಹಿನ್ನೆಲೆಯಲ್ಲಿ ಸೈಕಲ್ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಅಂದು ಬೆಳಿಗ್ಗೆ 7 ಗಂಟೆಗೆ ಸೈಕಲ್ ಜಾಥಾವು ನಗರದ ಡಾ. ಬಿ. ಆರ್. ಅಂಬೇಡ್ಕರ್ ಕ್ರೀಡಾಂಗಣದಿಂದ ಆರಂಭವಾಗಿ, ಗೋಲಗುಂಬಜ, ಗಗನಮಹಲ್, ವೀರರಾಣಿ ಕಿತ್ತೂರ ರಾಣಿ ಚನ್ನಮ್ಮ ಕೇಂದ್ರ ಬಸ್ ನಿಲ್ದಾಣ, ಬಸವೇಶ್ವರ ಸರ್ಕಲ್, ಗಾಂಧಿಚೌಕ್, ಶಿವಾಜಿ ಸರ್ಕಲ್,ವಾಟರ್ ಟ್ಯಾಂಕ್, ಇಬ್ರಾಹಿಂ ರೋಜಾ, ಗೋದಾವರಿ ಮಾರ್ಗವಾಗಿ ವಾಟರ್ ಟ್ಯಾಂಕ್, ಬಿ.ಎಲ್.ಡಿ.ಇ ಮುಖ್ಯ ಗೇಟ್, ಹಾಸ್ಪಿಟಲ್ ಗೇಟ್, ಸಿದ್ದೇಶ್ವರ ದೇವಸ್ಥಾನ, ಗಾಂಧಿ ಚೌಕ್ ಮಾರ್ಗವಾಗಿ ಸಾಗಿ ಪುನಃ ಡಾ.ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣಕ್ಕೆ ಆಗಮಿಸಿ ಮುಕ್ತಾಯಗೊಳ್ಳಲಿದೆ. ಸಾರ್ವಜನಿಕರು, ಯುವಕರು ಹಾಗೂ ಕ್ರೀಡಾಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಈ ಸೈಕಲ್ ಜಾಥಾವನ್ನು ಯಶಸ್ವಿಗೊಳಿಸುವಂತೆ ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ರಾಜಶೇಖರ ಧೈವಾಡಿ ಅವರು ಪ್ರಕಟಣೆ ಮೂಲಕ ಕೋರಿದ್ದಾರೆ.



# ಬ್ಯಾಂಕ್ ಆಫ್ ಮಹಾರಾಷ್ಟ್ರದಲ್ಲಿ ಕಮಲಾಕರ್ ಪವಾನಗೆ ಬೀಳ್ಕೊಡುಗೆ

ಕಲಬುರಗಿ:ನಗರದ ಸೂಪರ್ ಮಾರ್ಕೆಟನಲ್ಲಿರುವ ಬ್ಯಾಂಕ್ ಆಫ್ ಮಹಾರಾಷ್ಟ್ರದಲ್ಲಿ ಸೇವೆ ಸಲ್ಲಿಸಿ ವಯೋ ನಿವೃತ್ತಿ ಹೊಂದಿದ ಕಮಲಾಕರ್ ಪವಾರ್ ಅವರಿಗೆ ಬ್ಯಾಂಕಿನಲ್ಲಿ ಶನಿವಾರ ಬೀಳ್ಕೊಡುಗೆ ಸಮಾರಂಭವನ್ನು ಆಯೋಜಿಸಲಾಗಿತ್ತು.

ಬ್ಯಾಂಕಿನ ಹಿರಿಯ ವ್ಯವಸ್ಥಾಪಕ ದೀನ್ ದಯಾಳನ್ ಮತ್ತು ಬ್ಯಾಂಕಿನ ಸಿಬ್ಬಂದಿ ಕಮಲಾಕರ್ ಪವಾರ್ ದಂಪತಿಗಳಿಗೆ ಶಾಲು ಹೊದಿಸಿ ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಬ್ಯಾಂಕಿನ ಹಿರಿಯ ವ್ಯವಸ್ಥಾಪಕ ದೀನ್ ದಯಾಳನ್ ಅವರು "ಕಮಲಾಕರ್ ಪವಾರ್ ಅವರು ಸುಮಾರು 40 ವರ್ಷಗಳ ಕಾಲ ಬ್ಯಾಂಕ್ ಆಫ್ ಮಹಾರಾಷ್ಟ್ರದಲ್ಲಿ ಅತ್ಯುತ್ತಮವಾಗಿ ಸೇವೆ ಸಲ್ಲಿಸುವುದುರ ಮೂಲಕ ಸಿಬ್ಬಂದಿಗಳ ಪ್ರೀತಿ, ವಿಶ್ವಾಸಗಳಿಸಿದ್ದಾರೆ. ಅವರು ತಮ್ಮಾ ಸೇವಾ ಅವಧಿಯಲ್ಲಿ ಬ್ಯಾಂಕಿನ ಆಧಾರಸ್ತಂಭದಂತೆ ಕಾರ್ಯನಿರ್ವಹಿಸಿದ್ದಾರೆ ಎಂದು ಶ್ಲಾಘಿಸಿದರು. ಅವರ ನಿವೃತ್ತ ಜೀವನ ಸುಖಕರವಾಗಿರಲಿ ಎಂದು ಅವರು ಶುಭ ಹಾರೈಸಿದರು. ಬ್ಯಾಂಕಿನ ನಿವೃತ್ತ ವ್ಯವಸ್ಥಾಪಕ ಪ್ರವೀಣ್ ದೇಶಪಾಂಡೆ, ನಿವೃತ್ತ ಸಿಬ್ಬಂದಿ ಡಿ.ಕೆ.ಕುಲಕರ್ಣಿ ಅವರು ಮಾತನಾಡಿ, " ಕಮಲಾಕರ್ ಪವಾರ್ ಅವರು ಎಲ್ಲರಿಗೂ ಬೇಕಾದ ಸ್ವಚ್ಛ ಮನಸ್ಸಿನ ವ್ಯಕ್ತಿ. ಯಾವುದೇ ರೀತಿಯ ಕಪ್ಪು ಚುಕ್ಕೆ ಇಲ್ಲದಂತೆ ಅವರು ಬ್ಯಾಂಕಿನಲ್ಲಿ ಸುದೀರ್ಘ ಕಾಲ ಸೇವೆ ಸಲ್ಲಿಸಿದ್ದು, ಅವರ ನಿವೃತ್ತ ಜೀವನ ಆನಂದ ದಾಯಕವಾಗಿರಲಿ" ಎಂದು ಶುಭ ಕೋರಿದರು.

ಬ್ಯಾಂಕಿನ ಸಿಬ್ಬಂದಿಗಳು ಕಮಲಾಕರ್ ಅವರ ಸೇವೆಯನ್ನು ಮುಕ್ತಕಂಠದಿಂದ ಶ್ಲಾಘಿಸಿದರು.

ಬ್ಯಾಂಕಿನ ವ್ಯವಸ್ಥಾಪಕ ಸುಂಧರ್, ಉಪ ವ್ಯವಸ್ಥಾಪಕರಾದ ಆಕಾಶ್, ಸಾಯಿರಾಮ್, ಕ್ಲರ್ಕ್ ಕಾಮೇಶ್ವರಿ, ನಿವೃತ್ತ ಸಿಬ್ಬಂದಿಗಳಾದ ಜಾಂಬೇಕರ್, ಪದ್ಮಾವತಿ ಮದುಗುಣಿ, ಕಿಶೋರ ಗಾಯಕವಾಡ, ಡೇವಿಡ್, ಸಂಜೆವಾಣಿ ಪತ್ರಿಕೆಯ ಕಲಬುರಗಿ ಆವೃತ್ತಿಯ ಸಂಪಾದಕ ಟಿ.ಗಣೇಶಕುಮಾರ ಸೇ–ರಿದಂತೆ ಕಮಾಲಾಕರ್ ಪವಾರ್ ಅವರ ಕುಟುಂಬ ವರ್ಗದವರು, ಆತ್ಮೀಯರು ಸಮಾರಂಭದಲ್ಲಿ ಉಪಸ್ಥಿತರಿದ್ದರು.

# ಬಿತ್ತುವ ಪೂರ್ವ ಬೀಜೋಪಚಾರ ಕಡ್ಡಾಯ



ಕಲಬುರಗಿ:ತೊಗರಿ,ಹೆಸರು,ಉದ್ದು ಮತ್ತು ಇತರೆ ಬೀಜಬಿತ್ತುವ ಮುಂಚೆ ಕಡ್ಡಾಯವಾಗಿ ಕೃಷಿ ವಿಜ್ಞಾನ ಕೇಂದ್ರ ಅಥವಾ ಹತ್ತಿರದಕೃಷಿ ಇಲಾಖೆಯಲ್ಲಿ ಲಭ್ಯವಿರುವ ಜೈವಿಕ ಗೊಬ್ಬರವನ್ನು ಕಡ್ಡಾಯವಾಗಿಬೀಜೋಪಚಾರ ಮಾಡಬೇಕು. ಎಲ್ಲಾ ರೈತರು ಕಡಿಮೆ ಖರ್ಚಿನತಂತ್ರಜ್ಞಾನಗಳನ್ನು ಅಳವಡಿಸಿ ಹೆಚ್ಚಿನ ಲಾಭ ಪಡೆಯಬೇಕೆಂದು ಜೇವರ್ಗಿ ಸಮೀಪದ ಕೃಷಿ ವಿಜ್ಞಾನ ಕೇಂದ್ರ ರದ್ದೇವಾಡ್ಗಿ ಮುಖ್ಯಸ್ಥರಾದ ಡಾ. ಪಿ.ವಾಸುದೇವ ನಾಯ್ಕ್ ಅವರು ರೈತರಿಗೆ ವಿನಂತಿಸಿದ್ದಾರೆ.

ಬೀಜೊಪಚಾರದ ಕ್ರಮವು ಹೀಗಿದೆ.ಬಿತ್ತನೆ ಮಾಡುವ ಮೊದಲು ಬೀಜಗಳಿಗೆ ಶಿಲೀಂಧ್ರನಾಶಕ (ಟ್ರೇಕೋಡರ್ಮಾ, ರೈಜೋಬಿಯಂ) 4 ರಿಂದ 5 ಗ್ರಾಂ ಪ್ರತಿ ಕೆಜಿ ಬೀಜಕ್ಕೆ ಜೈವಿಕ ಅಣುಜೀವಿ ಗೊಬ್ಬರವನ್ನು ಲೇಪನ ಮಾಡುವುದಕ್ಕೆಬೀಜ ೋಪಚಾರವೆಂದು ಹೇಳುತ್ತಾರೆ.ಬೀಜಗಳಲ್ಲಿ ಬರನಿರೋಧಕತೆ ಹೆಚ್ಚಿಸಲು ಬೀಜಗಳನ್ನು ಶೇ.2ರಕ್ಯಾಲ್ಸಿಯಂ ಕ್ಲೋರೈಡ್ ದ್ರಾವಣದಲ್ಲಿ 1 ತಾಸು ನೆನೆಸಿ ನಂತರ ನೆರಳಿನಲ್ಲಿಕನಿಷ್ಠ 7 ತಾಸು ಒಣ–ಗಿಸಬೇಕು.ಬೀಜಗಳನ್ನುರೈಜೋಬಿಯಂ(200ಗ್ರಾಂ ಪ್ರತಿ ಎಕರೆ ಬೀಜಕ್ಕೆ) ಹಾಗೂರಂಜಕ ಕರಗಿಸುವ ಗೊಬ್ಬರದಿಂದ (ಪಿ.ಎಸ್.ಬಿ 200ಗ್ರಾಂ ಪ್ರತಿ ಎಕರೆ ಬೀಜಕ್ಕೆ)ಉಪಚರಿಸಬೇಕು. ರೈಜೋಬಿಯಂನ್ನು ಬೀಜೋಪಚಾರ ಮಾಡುವುದರಿಂದ ಬೆಳೆಗೆಶಿಫಾರಸ್ಸು ಮಾಡಿದ ಶೇ.50 ರಷ್ಟು ಸಾರಜನಕವನ್ನು ಉಳಿಸಬಹುದು.ನೆಟೆರೋಗದ ನಿರ್ವಹಣೆಗೆ 4 ಗ್ರಾಂ ಟ್ರೈಕೋಡರ್ಮಾ ಜೈವಿಕ ಜೀವಾಣುಶಿಲೀಂಧ್ರನಾಶಕದಿಂದ ಬೀಜೋಪಚಾರ ಮಾಡಿದ ಬೀಜಗಳನ್ನು ನೇರಳಿನಲ್ಲಿಒಣಗಿಸಿ ನಂತರ ಬಿತ್ತನೆ ಮಾಡಬೇಕು. ಜೈವಿಕ ಗೊಬ್ಬರಗಳನ್ನು ಉಪಚಾರ ಮಾಡಲು ಬೆಲ್ಲದ ದ್ರಾವಣವನ್ನುಅವಶ್ಯಕತೆ ಇದೆ. ದ್ರಾವಣವು ಅಂಟು ರೂಪಕ್ಕೆ ಬಂದಾಗ ಬೀಜಗಳಿಗೆ ಲೇಪನಮಾಡಬೇಕು. ವಿಶೇಷ ಸೂಚನೆ:

ರದ್ದೇವಾಡಗಿ ಕೃಷಿ ವಿಜ್ಞಾನ ಕೇಂದ್ರದಲ್ಲಿ ಸುಧಾರಿತ ತೊಗರಿ ತಳಿ: ಜಿ.ಆರ್.ಜಿ–152, ಜಿ.ಆರ್.ಜಿ–811 ಬೀಜಗಳು ಮಾರಾಟಕ್ಕೆ ಲಭ್ಯವಿದೆ.ಆಸಕ್ತರು ಕೇಂದ್ರಕ್ಕೆ ಭೇಟಿ ಕೊಟ್ಟು ಬೀಜಗಳನ್ನು ಖರೀದಿಸಲು ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಕೃಷಿ ವಿಜ್ಞಾನ ಕೇಂದ್ರ ರದ್ದೇವಾಡ್ಗಿ ಮುಖ್ಯಸ್ಥ ಡಾ. ಪಿ.ವಾಸುದೇವ ನಾಯ್ಕ್ ಅವರನ್ನು ಸಂಪರ್ಕಿಸಬಹುದು: 9739598464,8296203191

# ಕಲಬುರಗಿ ಕಲಾವಿದ ರೆಹಮಾನ್ ಪಟೇಲ್ ಬೆಂಗಳೂರಿನ ಕ್ಲೈಮೇಟ್ ಸಮ್ಮಿರಗೆ ಆಹ್ವಾನ



ಕಲಬುರಗಿ :ನಗರದ ಕಲಾವಿದ ರೆಹಮಾನ್ ಪಟೇಲ್ ಅವರಿಗೆ ಪ್ರತಿಷ್ಠಿತ "ಬೆಂಗಳೂರು ಕ್ಲೈಮೇಟ್ ಸಮ್ಮಿಟ್–ಆಲ್ಟರ್ನೇಟಿವ್ 26" ಕಾರ್ಯಕ್ರಮದಲ್ಲಿ ಭಾಗವಹಿಸಲು ಆಹ್ವಾನ ಲಭಿಸಿದೆ. ವಿಮೋವ್ ಸಂಸ್ಥೆಯ ಮುಂದಾಳತ್ವದಲ್ಲಿ ನಡೆಯುತ್ತಿರುವ ಈ ಸಮಾವೇಶವು ಹವಾಮಾನ ನವೋತ್ಪಾದನೆ, ಪರಿಸರ ಸಂರಕ್ಷಣೆ ಹಾಗೂ ಸುಸ್ಥಿರ ನಗರಾಭಿವೃದ್ಧಿಗೆ ಸಂಬಂಧಿಸಿದ ಕಾರ್ಯಚಟುವಟಿಕೆಗಳಿಗೆ ವೇದಿಕೆಯಾಗಲಿದೆ.

ಈ ಸಮಾವೇಶದ ಅಂಗವಾಗಿ ನಡೆಯಲಿರುವ "ಆರ್ಟ್ ಫಾರ್ ಕ್ಲೈಮೇಟ್ ಲೈವ್ ಆರ್ಟ್ ಕ್ಯಾಂಪ್" ಕಾರ್ಯಕ್ರಮದಲ್ಲಿ ರೆಹಮಾನ್ ಪಟೇಲ್ ಭಾಗವಹಿಸಲಿದ್ದು, ಕಲೆ ಮತ್ತು ಸಂಸ್ಕೃತಿಯ ಮೂಲಕ ಹವಾಮಾನ ಜಾಗೃತಿ ಮೂಡಿಸುವ ಜೊತೆಗೆ ಸುಸ್ಥಿರ ಭವಿಷ್ಯದ ಪರಿಕಲ್ಪನೆಯನ್ನು ಜನರಲ್ಲಿ ಬೆಳೆಸುವ ಉದ್ದೇಶ ಹೊಂದಿದೆ.

ಈ ಎರಡು ದಿನಗಳ ಕಾರ್ಯಕ್ರಮವು ಜೂನ್ 4 ಮತ್ತು 5 ರಂದು ಬೆಂಗಳೂರಿನ ವೈಟ್‌ಫೀಲ್ಡ್ ಐಟಿ ಕಾ–ರಿಡಾರನ ಎಸಿಇಎಸ್ ಲೇಔಟನಲ್ಲಿರುವ ಸಿಎಂಆರ್ ಇನಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯಲ್ಲಿ ನಡೆಯಲಿದೆ.

ಸಮ್ಮಿರನಲ್ಲಿ ರೆಹಮಾನ್ ಪಟೇಲ್ ಅವರು ಪರಿಸರ ಮಾಲಿನ್ಯ ಮತ್ತು ಪರಿಸರ ಅಸಮತೋಲನದಿಂದ ಸಂಕಷ್ಟಕ್ಕೊಳಗಾಗಿರುವ ಭೂಮಿಯ ರಕ್ಷಣೆಯ ಅಗತ್ಯತೆಯನ್ನು ಪ್ರತಿಬಿಂಬಿಸುವ ಸಮಕಾಲೀನ ಚಿತ್ರಕಲೆಯನ್ನು ಸೃಷ್ಟಿಸಲಿದ್ದಾರೆ.

ಕಾರ್ಯಕ್ರಮದ ಕಲಾ ನಿರ್ದೇಶಕರಾದ ಎಂ. ಜಿ. ದೊಡ್ಡಮನಿ ಅವರು ಮಾತನಾಡಿ, ಹವಾಮಾನ ಮತ್ತು ಪರಿಸರ ವಿಷಯಾಧಾರಿತ ಲೈವ್ ಆರ್ಟ್ ಪ್ರದರ್ಶನಕ್ಕಾಗಿ ರಾಜ್ಯದ ವಿವಿಧ ಭಾಗಗಳಿಂದ ಆಯ್ಕೆಯಾದ ಹತ್ತು ಖ್ಯಾತ ಕಲಾವಿದರ ಪೈಕಿ ರೆಹಮಾನ್ ಪಟೇಲ್ ಒಬ್ಬರಾಗಿದ್ದಾರೆ ಎಂದು ತಿಳಿಸಿದ್ದಾರೆ. ಗಣೇಶ್ ದೊಡ್ಡಮನಿ ಶಿಬಿರದ ಸಂಚಾಲಕರಾಗಿ ಕಾರ್ಯನಿರ್ವಹಿಸಿದರು.




# ಪ್ರಪಂಚದ ಅತೀ ಪ್ರಾಚಿನ ಭಾಷೆಗಳಲ್ಲಿ ಕನ್ನಡವೂ ಒಂದು

ಬೀದರ:ಜಾಗತಿಕರಣದ ಯಾವುದೇ ಒತ್ತಡದಲ್ಲಿಯು ಕನ್ನಡ ಅಮರವಾಗಿ ಉಳಿಯುತ್ತದೆ ಅದು ಪ್ರಪಂಚದ ಅತಿ ಪ್ರಾಚಿನ ಭಾಷೆಗಳಲ್ಲಿ ಒಂದಾಗಿದ್ದು ಬದಲಾದ ಕಾಲ ಗತಿಯೊಂದಿಗೆ ಹೊಂದಿಕೊಂಡು ಬೆಳೆಯುವ ಶಕ್ತಿ ಅದಕ್ಕಿದೆ ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಶ್ರೀ ಸುರೇಶ ಚನಶೆಟ್ಟಿ ನುಡಿದರು.

ಅವರು ಬೀದರ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಕನ್ನಡಭವನದಲ್ಲಿ ಆಯೋಜಿಸಿದ ಕನ್ನಡ ಸಾಹಿತ್ಯ ಪರಿಷತ್ತಿನ ಸಂಸ್ಥಾಪನಾ ದಿನಾಚರಣೆಯಲ್ಲಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತ ಏಷ್ಯಾ ಖಂಡದಲ್ಲಿ ಅತ್ಯಂತ ದೊಡ್ಡ ಸಂಸ್ಥೆ ಕನ್ನಡ ಸಾಹಿತ್ಯ ಪರಿಷತ್ತು ಸುಮಾರು 3.5 ಲಕ್ಷ ಜನ ಸದಸ್ಯರನೊಳಗೊಂಡ ಕ.ಸಾ.ಪ ಕನ್ನಡ ನಾಡು ನುಡಿ ನೆಲ ಜಲ ಸಂರಕ್ಷಣೆಯೊಂದಿಗೆ ಹಲವಾರು ಜನಪರ ಕಾಳಜಿ ಹೋರಾಟಗಳ ಮೂಲಕ ಸಮಸ್ತ ಕನ್ನಡಿಗರ ಹಿತಕಾಪಾಡುತ್ತಾ ಬಂದದ್ದು ಚಾರಿತ್ರೀಕವಾಗಿ ಮಹತದ್ದುಎಂದು ನುಡಿದರು. ಸಮಾರಂಭದ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಕಲ್ಯಾಣರಾವ ಚಳಕಾಪು ರೆಯವರುಮಾತನಾಡುತ್ತ ದಿವಾನರಾಗಿದ್ದ ಸರ್ ಎಂ. ವಿಶ್ವೇಶ್ವರಯ್ಯ ಹಾಗೂ ಮೈಸೂರು ಮಹಾರಾಜಾ ನಾಲ್ವಡಿ ಕೃಷ್ಣರಾಜ ಒಡೆಯರವರ ಕನ್ನಡ ಭಾಷೆ ಸಾಹಿತ್ಯದ ಹಿನ್ನೆಲೆಯ ನಾಡು ನುಡಿ ಕಾಳಜಿ ಕೇಂದ್ರಿತ ದೂರದೃಷ್ಠಿಯ ಫಲವಾಗಿ ಹುಟ್ಟಿಕೊಂಡ ಕನ್ನಡ ಸಾಹಿತ್ಯ ಪರಿಷತ್ತು ಪರಂಪರೆಯ ಇತಿಹಾಸ ವಿವ–ರಿಸುತ್ತ ಗಡಿಭಾಗವಾದ ಬೀದರದಲ್ಲಿ ಹಿಂದಿಗಿಂತ ಹೆಚ್ಚು ಕಾರ್ಯಕ್ರಮ ಆಯೋಜಿಸುವ ಮೂಲಕ ಕನ್ನಡ ಸಾಹಿತ್ಯ ಪರಿಷತ್ತು ಕ್ರಿಯಾಶೀಲ ಗೊಳಿಸಿದ ಕೀರ್ತಿ ಸುರೇಶ ಚನ್ನಶೆಟ್ಟಿಯವರಿಗೆ ಸಲ್ಲುತ್ತದೆಂದು ಅಭಿಪ್ರಾಯಪಟ್ಟರು. ಬೀದರ ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಟಿ. ಎಂ. ಮಚ್ಚೆಯವರು ಅಧ್ಯಕ್ಷತೆ ವಹಿಸಿ ಮಾತನಾಡಿದರು. ಎಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ಎಮ್. ಎಸ್ ಮನೋಹರ, ಕರ್ನಾಟಕ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಡಾ. ಬಸವರಾಜ ಬಲ್ಲೂರ್, ಉಪಾಧ್ಯಕ್ಷರು ಜಗನ್ನಾಥ ಕಮಲಾಪುರೆ, ಸಂಜುಕುಮಾರ ಅಲ್ಲೂರೆ,ಆನಂದ ಪಾಟೀಲ, ಅಶೋಕ ದೀಡಗೆ ಮೊದಲಾದವರು ಉಪಸ್ಥಿತರಿದ್ದರು. ತಾಲ್ಲೂಕು ಕಸಾಪ ಕಾರ್ಯದರ್ಶಿ ಉಮೇಶ ಜಾಬಾ, ಸ್ವಾಗತ ಕೋರಿದರು ವೀರಶೆಟ್ಟಿ ಚನಶೆಟ್ಟಿ ವಂದಾನಾರ್ಪಣೆ ಸಲ್ಲಿಸಿದರು.

# ಪ್ರಿಯಾಂಕ್ ಖರ್ಗೆ ಡಿಸಿಎಂ ಸ್ಥಾನಕ್ಕಾಗಿ ಆನಂದಕುಮಾರ ಟೈಗರ್ ನೇತೃತ್ವದಲ್ಲಿ ವಿಶೇಷಪೂಜೆ



ಚಿಂಚೋಳಿ : ಪಟ್ಟಣದ ಬುದ್ಧ ವಿಹಾರದಲ್ಲಿ ಪುರಸಭೆ ಮಾಜಿ ಅಧ್ಯಕ್ಷ ಆನಂದಕುಮಾರ ಟೈಗರ್ ಅವರ ನೇತೃತ್ವದಲ್ಲಿ ನೂತನ ಸರ್ಕಾರದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ಒದಗಲಿ ಎಂದು ಬುದ್ಧ ವಿಹಾರದಲ್ಲಿ ಬುದ್ಧನಿಗೆ ವಿಶೇಷ ಪೂಜೆ ಸಲ್ಲಿಸಿ ಪ್ರಾರ್ಥಿಸಿದರು. ಬಳಿಕ ಆನಂದ ಟೈಗರ್, ಮಾತನಾಡಿದ ಸಚಿವ ಪ್ರಿಯಾಂಕ್ ಖರ್ಗೆ, ಅವರು ತಮದೇ ವರ್ಚಸ್ಸಿನಿಂದ ಜಿಲ್ಲೆಯ ಅಭಿವೃದ್ಧಿ ಕಾರ್ಯಗಳು ನಡೆಸಿದ್ದಾರೆ ಹೀಗಾಗಿ ಅವರು ಇಂದಿನ ಯುವ ಪೀಳಿಗೆಗೆ ಮಾದರಿ ನಾಯಕ ಎನ್ನಿಸಿದ್ದಾರೆ. ಸಚಿವರಿಗೆ ಉಪ ಮುಖ್ಯಮಂತ್ರಿ ಸ್ಥಾನಕ್ಕೆ ಪರಿಗಣಿಸಿದೆಯಾದಲ್ಲಿ ಕಲ್ಯಾಣ ಕರ್ನಾಟಕ ಭಾಗದ ಕಾಂಗ್ರೆಸ್ ಪಕ್ಷದ ಸಂಘಟನೆ ಗಟ್ಟಿಯಾಗಿ ಬಲವರ್ಧನೆಗೊಳಲಿದೆ. ಅವರು ಎಲ್ಲಾ ಜಾತಿ ಜನಾಂಗದವರನ್ನು ಒಂದೇ ರೀತಿಯಲ್ಲಿ ಕಾಣುವ ಸಹೃದಯಿ ನಾಯಕ ಎನ್ನಿಸಿಕೊಂಡಿದ್ದಾರೆ. ಅಲ್ಲದೇ ಪ್ರಿಯಾಂಕ್ ಖರ್ಗೆ ಅವರು ತಮ್ಮನ್ನು ಭೇಟಿಯಾಗಲು ಬಂದ

ಚಿಕ್ಕವರು, ದೊಡ್ಡವರು ಅನ್ನದೆ ಎಲ್ಲರನ್ನು ಪ್ರೀತಿಯಿಂದ ಮಾತನಾಡಿಸಿ ಅವರ ಸಮಸ್ಯೆ ಆಲಿಸುವುದಲ್ಲದೆ ಎಲ್ಲರನ್ನು ಅಪ್ಪಿಕೊಂಡು ವಿಶ್ವಾಸಕ್ಕೆ ತೆಗೆದುಕೊಂಡು ಬುದ್ಧ, ಬಸವ, ಅಂಬೇಡ್ಕರ್ ಅವರ ತತ್ವ ಸಿದ್ದಾಂತಗಳು ಮೈಗೂಡಿಸಿಕೊಂಡು ಪಾಲನೆ ಮಾಡುತ್ತಿದ್ದಾರೆ. ಈ ಹಿನ್ನಲೆಯಲ್ಲಿ ಕೇಂದ್ರದ ಕಾಂಗ್ರೆಸ ಪಕ್ಷದ ವ–ರಿಷ್ಠರು ಯುವ ನಾಯಕ ಪ್ರಿಯಾಂಕ್ ಖರ್ಗೆ ಅವರಿಗೆ ಉಪಮುಖ್ಯಮಂತ್ರಿ ಸ್ಥಾನಕ್ಕೆ ಪರಿಗಣಿಸಿ ನೀಡಿ, ಕಲ್ಯಾಣ ಕರ್ನಾಟಕ ಭಾಗದ ಯುವ ಕಾರ್ಯಕರ್ತರು ಮತ್ತು ಪಕ್ಷದ ಕಾರ್ಯಕರ್ತ ಅಭಿಮಾನಿಗಳದ ಆಸೆಯಾಗಿದ್ದು, ವ–ರಿಷ್ಠರು ಪ್ರಿಯಾಂಕ್ ಖರ್ಗೆ, ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ಒದಗಿಸಬೇಕೆಂದು ಕಾಂಗ್ರೆಸ್ ಪಕ್ಷದ ವರಿಷ್ಠರಲ್ಲಿ ಆನಂದ ಟೈಗರ್ ಮನವಿ ಮಾಡಿದ್ದಾರೆ. ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ತಾಲೂಕ ಅಧ್ಯಕ್ಷ ಬಸವರಾಜ ಮಲಿ, ಹಿರಿಯ ಮುಖಂಡ ಬಾಬುರಾವ್ ಪಾಟೀಲ್, ಜಿ. ಪಂ. ಮಾಜಿ ಅಧ್ಯಕ್ಷ ದೀಪನಾಗ ಪುಣ್ಯಶೆಟ್ಟಿ, ಕಾಂಗ್ರೆಸ್ ಪಕ್ಷದ ಮುಖಂಡರಾದ ಅಬ್ದುಲ್ ಬಾಶೀದ್, ವಿಶ್ವನಾಥ ಹೊಡೆಬಿರನಳ್ಳಿ, ನಾಗೇಶ ಗುಣಾಜಿ, ವಿಜಯಕುಮಾರ ಘಾಟ್ಗೆ, ಕಾಶಿನಾಥ ಶಿಂಥೆ, ಆರ್ ಗಣಪತರಾವ, ಲಕ್ಷ್ಮಣ ಆವಂಟಿ, ಅನಿಲ ಜಮಾದಾರ್ ಹುಡದಳ್ಳಿ, ಮಗಸೂದ ಸೌದಾಗರ್, ಓಮನರಾವ್ ಕೊರವಿ, ರಾಮಶೆಟ್ಟಿ ಪವಾರ, ಡಾ. ತುಕಾರಾಮ ಪವಾರ, ವೀರಶೆಟ್ಟಿ ಪಾಟೀಲ್, ಲೋಕೇಶ ಐನೋಳಿ, ಶಶಿಕುಮಾರ ಮೇತ್ರಿ, ವಿಲಾಸ್ ದೇಗಲಮಡಿ, ಅಕ್ಷಯ್ ಕೊರವಿ, ಶಂಕರ್ ಕುಸಳೆ, ಮತ್ತು ಕಾಂಗ್ರೆಸ್ ಪಕ್ಷದ ಅನೇಕ ಕಾರ್ಯಕರ್ತರು ಇದ್ದರು

# ಕನ್ನಡದ ಮೊದಲ ಸಾಮ್ರಾಜ್ಯ ಕದಂಬರ ಕೊಡುಗೆ ಅಪಾರ



ಕಲಬುರಗಿ : ಕನ್ನಡ ನಾಡನ್ನು ಅನೇಕ ರಾಜ ಮನೆತನಗಳು ಆಳ್ವಿಕೆ ಮಾಡಿವೆ. ಆದರೆ, ಕನ್ನಡವನ್ನು, ಕನ್ನಡದ ರಾಜವಂಶವು ಮೊದಲ ಬಾರಿಗೆ ಆಳ್ವಿಕೆ ಮಾಡಿದ್ದು ಕದಂಬರಾಗಿದ್ದಾರೆ. ಮಯೂರಶರ್ಮ(ಮಯೂರವರ್ಮ)ನಿಂದ ಕ್ರಿ.ಸ್.345ರಲ್ಲಿ ಸ್ಥಾಪನೆಗೊಂಡು, ಉತ್ತರ ಕನ್ನಡ ಜಿಲ್ಲೆಯ ಬನವಾಸಿ ರಾಜಧಾನಿಯಾಗಿಸಿಕೊಂಡು ಉತ್ತಮ ಆಳ್ವಿಕೆ ಮಾಡುವ ಮೂಲಕ ಕನ್ನಡ ನಾಡು–ನುಡಿಗೆ ಅಪಾರವಾದ ಕೊಡುಗೆಯನ್ನು ನೀಡಿದೆ ಎಂದು ಉಪನ್ಯಾಸಕ ಎಚ್.ಬಿ.ಪಾಟೀಲ್ ಅಭಿಮತಪಟ್ಟರು.

ನಗರದ ಆಳಂದ ರಸ್ತೆಯ ಶಿವ ನಗರದಲ್ಲಿನ 'ಜ್ಞಾನ ಚಿಗುರು ಟ್ಯುಟೋರಿಯಲ್ಸ್'ನಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗಿದ 'ಕದಂಬ ಸಾಮ್ರಾಜ್ಯದ 1681ನೇ ಸಂಸ್ಥಾಪನಾ ದಿನಾಚರಣೆ'ಯಲ್ಲಿ ಕದಂಬ ಸಾಮ್ರಾಜ್ಯದ ಸ್ಥಾಪಕ ಮಯೂರಶರ್ಮನ ಭಾವಚಿತ್ರಕ್ಕೆ ಗೌರವ ಸಲ್ಲಿಸಿ, ಅವರು ಮಾತನಾಡುತ್ತಿದ್ದರು.

ಕದಂಬರು ಕನ್ನಡ ನಾಡು, ನುಡಿ ಮತ್ತು ಸಂಸ್ಕೃತಿಯ ಇತಿಹಾಸದಲ್ಲಿ ಬಲವಾದ ಅಡಿಪಾಯ ಹಾಕಿದ ಮೊಟ್ಟಮೊದಲ ಸ್ಥಳೀಯ ಕನ್ನಡ ಸಾಮ್ರಾಜ್ಯವಾಗಿದೆ. ಇವರು ಕಂಚಿಯ ಪಲ್ಲವರೊಂದಿಗೆ ಯುದ್ಧ ಮಾಡಿ, ಸ್ವತಂತ್ರ ಕನ್ನಡ ರಾಜ್ಯವನ್ನು ಸ್ಥಾಪಿಸಿದರು. ಆಡಳಿತ ಮಟ್ಟದಲ್ಲಿ ಕನ್ನಡವನ್ನು ರಾಜ್ಯಭಾಷೆಯಾಗಿ ಬಳಸಿದ ಪ್ರಪ್ರಥಮ ರಾಜವಂಶ ಇದಾಗಿದೆ. ತಾಳಗುಂದ ಶಾಸನವು ಕದಂಬರ ಮೂಲ ಮತ್ತು ಮಯೂರಶರ್ಮನು ರಾಜ್ಯ ಸ್ಥಾಪನೆ ಮಾಡಿದ ಕಥೆಯನ್ನು ವಿವರಿಸುತ್ತದೆ. ಹಲ್ಮಿಡಿ ಶಾಸನವು ಕನ್ನಡದ ಮೊಟ್ಟಮೊದಲ ಉಪಲಬ್ಧ ಶಾಸನವಾಗಿದೆ. ಇದು ಕನ್ನಡ ಭಾಷೆಯ ಪ್ರಾಚೀನತೆಗೆ ಪ್ರಮುಖ ಸಾಕ್ಷಿಯಾಗಿದೆ ಎಂದರು.

ಕದಂಬರು ತಮ್ಮದೇ ಆದ ವಿಶಿಷ್ಟ ದೇವಾಲಯ ನಿರ್ಮಾಣದ ವಾಸ್ತು ಶೈಲಿಯನ್ನು ಹೊಂದಿದ್ದರು, ಇದನ್ನು "ಕದಂಬ ಶಿಖರ" ಎಂದು ಕರೆಯಲಾಗುತ್ತದೆ. ಕದಂಬ ಸಾಮ್ರಾಜ್ಯದ ಸಂಸ್ಥಾಪಕ ಮಯೂರವರ್ಮನು ಕನ್ನಡ ಭಾಷೆ ಮತ್ತು ಕರ್ನಾಟಕದ ಇತಿಹಾಸಕ್ಕೆ ನೀಡಿದ ಕೊಡುಗೆ ಅತ್ಯುನ್ನತವಾಗಿದೆ. ಆಡಳಿತ ಭಾಷೆಯಾಗಿ ಕನ್ನಡವನ್ನು ಬಳಸಿದ ಪ್ರಥಮ ಕನ್ನಡಿಗ ದೊರೆ ಎಂಬ ಹೆಗ್ಗಳಿಕೆ ಈತನದಾಗಿದೆ. ಕನ್ನಡ ನೆಲ, ಭಾಷೆ ಮತ್ತು ಸಂಸ್ಕೃತಿಗೆ ರಾಜಕೀಯ ಮಾನ್ಯತೆ ತಂದುಕೊಟ್ಟು, ಕನ್ನಡ ಭಾಷಿಕ–ರಿಗೆ ಸ್ವಾವಲಂಬನೆ ಮತ್ತು ಸ್ವಾಭಿಮಾನದ ಬೀಜ ಬಿತ್ತಿದನು. ಕನ್ನಡ ಭಾಷೆಯ ಬೆಳವಣಿಗೆಗೆ ಬುನಾದಿ ಹಾಕಿದನು ಎಂದು ನುಡಿದರು.

ಕಾರ್ಯಕ್ರಮದಲ್ಲಿ ಸಮಾಜ ಸೇವಕ ಶಿವಯೋಗೆಪ್ಪಾ ಎಸ್.ಬಿರಾದಾರ,ಶಿಕ್ಷಕಿ ಚಂಪಾಕಲಾ ನೆಲ್ಲುರೆ ಹಾಗೂ ವಿದ್ಯಾರ್ಥಿಗಳಿದ್ದರು.

# ಧೂಮಪಾನದಿಂದ ದೈಹಿಕ, ಮಾನಸಿಕ ಆರೋಗ್ಯದ ಮೇಲೆ ದುಷ್ಪರಿಣಾಮ



ಕಲಬುರಗಿ: ನಮ್ಮ ದೇಶದ ಒಟ್ಟು ಜನಸಂಖ್ಯೆಯಲ್ಲಿ ಅರ್ಧದಷ್ಟು ಯುವ ಶಕ್ತಿಯಿದೆ. ರಾಷ್ಟ್ರ ಅಭಿವೃದ್ಧಿಯಲ್ಲಿ ಸದೃಢ ಮಾನವ ಸಂಪನ್ಮೂಲ ತುಂಬಾ ಅಗತ್ಯವಾಗಿದೆ. ಅದರಲ್ಲಿಯೂ ಯುವಕರು ರಾಷ್ಟ್ರದ ಶಕ್ತಿಯಾಗಿದ್ದಾರೆ. ಆದರೆ ನಮ್ಮ ಯುವಕರು ವಿವಿಧ ಕಾರಣಗಳಿಂದ ಧೂಮಪಾನ ವ್ಯಸನಿಗಳಾಗಿ, ಅದಕ್ಕೆ ಬಲಿಯಾಗುತ್ತಿರುವುದು ವಿಷಾದನೀಯ ಸಂಗತಿಯಾಗಿದೆ. ಧೂಮಪಾನ ಸೇವನೆಯಿಂದ ವ್ಯಕ್ತಿಯ ದೈಹಿಕ ಮತ್ತು ಮಾನಸಿಕದ ಮೇಲೆ ದುಷ್ಪರಿಣಾಮವಾಗುತ್ತದೆ ಎಂದು ವೈದ್ಯಾಧಿಕಾರಿ ಡಾ.ಅನುಪಮಾ ಎಸ್.ಕೇಶ್ವಾರ ಹೇಳಿದರು.

ನಗರದ ಶೇಖರೋಜಾದಲ್ಲಿರುವ ಶಹಾಬಜಾರ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗಿದ 'ವಿಶ್ವ ಧೂಮಪಾನ ನಿಷೇಧ ದಿನಾಚರಣೆ'ಯಲ್ಲಿ ಅವರು ಮಾತನಾಡುತ್ತಿದ್ದರು.

ತಂಬಾಕು ಒಳಗೊಂಡ ಬೀಡಿ, ಸಿಗರೇಟ್ ಹಾಗೂ ಗುಟಕಾ ಸೇವನೆಯಿಂದ ಸೇವನೆಯಿಂದ ಕ್ಯಾನ್ಸರ್ ರೋಗ ಉಂಟಾಗುತ್ತದೆ. ಜೊತೆಗೆ ಅನ್ನನಾಳಕ್ಕೆ ಆಸಿಡ್ ಸುರಿದು, ಹೊಟ್ಟೆ ನೋವು, ಗಂಟಲು ಕ್ಯಾನ್ಸರ್, ಪಾರ್ಕಿನಸನ್ ರೋಗ, ನಪುಂಸತತ್ವದಂತಹ ರೋಗಗಳು ಉಂಟಾಗುತ್ತವೆ. ಗುಟಕಾ ಸೇವಿಸುವುದರಿಂದ ಬಾಯಿಯ ಲೋಳೆಪರೆಯು ಗಡುಸಾಗಿ, ಬಾಯಿಯ ಚಟುವಟಿ–ಕೆಗಳಿಗೆ ಅಡ್ಡಿ ಉಂಟಾಗಿ, ಕೊನೆಗೆ ಅದರ ಚಟುವಟಿ–ಕೆ ಸ್ಥಗಿತಗೊಳಿಸುತ್ತದೆ. ಇದರಲ್ಲಿರುವ ಮೆಂಥೋಲ್ ಅಂಶ ಬಾಯಿಯ ಕ್ಯಾನ್ಸರಗೆ ಕಾರಣವಾಗುತ್ತದೆ. ಅನ್ನ ನಾಳದಲ್ಲಿ ಹುಣ್ಣಾಗುವುದು, ಆಹಾರ ಸೇವಿಸಿದರೆ ವಾಂತಿಯಾಗುವುದು ಸೇರಿದಂತೆ ಅನೇಕ ಸಮಸ್ಯೆಗಳು ಉಂಟಾಗುತ್ತವೆ. ಆದ್ದರಿಂದ ತಂಬಾಕು ಸೇವನೆಯಿಂದ ದೂರವಿರಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬಳಗದ ಅಧ್ಯಕ್ಷ ಹಾಗೂ ಉಪನ್ಯಾಸಕ ಎಚ್.ಬಿ.ಪಾಟೀಲ, ಸಮಾಜ ಸೇವಕ ಶಿವಯೋಗೆಪ್ಪಾ ಎಸ್.ಬಿರಾದಾರ, ಸಿಬ್ಬಂದಿಗಳಾದ ಜಗನ್ನಾಥ ಗುತ್ತೇದಾರ,ಗಂಗಾಜ್ಯೋತಿ ಗಂಜಿ, ಸಂಗಮ್ಮ ಅತನೂರ, ನಾಗೇಶ್ವರಿ ಮುಗಳಿವಾಡಿ, ಚಂದ್ರಕಲಾ ಮಠಪತಿ, ಅರ್ಚನಾ ಸಿಂಗೆ, ಲಕ್ಷ್ಮೀ ಮೈಲಾರಿ, ಮಂಗಲಾ ಚಂದಾಪುರೆ, ರೇಷ್ಮಾ ನಕ್ಕುಂದಿ, ಶ್ರೀದೇವಿ ಸಾಗರ, ಸೇವಕಿ ನಾಗಮ್ಮ ಚಿಂಚೋಳಿ ಸೇರಿದಂತೆ ಇನ್ನಿತರರು ಇದ್ದರು.

# ಬಂದಾನವಾಝ್ ಮತ್ತು ಸೂಫಿ ಸಾಹಿತ್ಯ ಕುರಿತು ವಿಶೇಷ ಉಪನ್ಯಾಸ



ಕಲಬುರಗಿ: ಸೂಫಿ ಸಂತ ಹಜರತ್ ಖ್ವಾಜಾ ಬಂದಾನವಾಝ್ ಗೇಸುದರಾಜ್ ಅವರ ಜೀವನ, ತತ್ವಚಿಂತನೆ, ಸಾಮಾಜಿಕ ಸೇವೆ ಹಾಗೂ ಸಾಹಿತ್ಯಿಕ ಕೊಡುಗೆಗಳು ಇಂದಿನ ಸಮಾಜಕ್ಕೂ ಮಾರ್ಗದರ್ಶಕವಾಗಿವೆ ಎಂದು ಸಾಹಿತಿ–ಚಿಂತಕ ಮನೋಜಕುಮಾರ ಗುದ್ದಿ ಅಭಿಪ್ರಾಯಪಟ್ಟರು

ನಗರದ ವಿಶ್ವನಾಥರೆಡ್ಡಿ ಮುದ್ನಾಳ ಪದವಿ ಹಾಗೂ ಸ್ನಾತಕೋತ್ತರ ಮಹಾವಿದ್ಯಾಲಯದಲ್ಲಿ ಧಾರವಾಡದ ಕರ್ನಾಟಕ ವಿದ್ಯಾವರ್ಧಕ ಸಂಘದ ವತಿಯಿಂದ ಆಯೋಜಿಸಿದ್ದ 'ಬಂದಾನವಾಝ್ ಮತ್ತು ಸೂಫಿ ಸಾಹಿತ್ಯ' ವಿಶೇಷ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು "ವಿಶ್ವನಾಥರೆಡ್ಡಿ ಮುದ್ನಾಳ ಅವರ ಬದುಕು ಈ ಭಾಗದ ಸೌಹಾರ್ದ ಪರಂಪರೆಯ ಪ್ರತೀಕವಾಗಿತ್ತು. ಅವರ ಹೆಸರಿನ ಕಾಲೇಜಿನಲ್ಲಿ ಸೂಫಿ ಸಾಹಿತಿ ಬಂದಾನವಾಝ್ ಕುರಿತು ಉಪನ್ಯಾಸ ಆಯೋಜಿಸಿರುವುದು ಅರ್ಥಪೂರ್ಣ ಕಾರ್ಯವಾಗಿದೆ" ಎಂದು ಹೇಳಿದರು.

ವಿಶೇಷ ಉಪನ್ಯಾಸ ನೀಡಿದ ಬೋಡೆ ರಿಯಾಜ್ ಅಹ್ಮದ್ ಅವರು, ಖ್ವಾಜಾ ಬಂದಾನವಾಝರು ಬಾಲ್ಯದಲ್ಲಿಯೇ ದೇವಗಿರಿ (ದೌಲತಾಬಾದ್) ಪ್ರದೇಶಕ್ಕೆ ಬಂದು ತಮ್ಮ ತಂದೆಯ ನಿಧನದ ಬಳಿಕ ದೆಹಲಿಗೆ ತೆರಳಿ ಅಲ್ಲಿನ ಸೂಫಿ ಪರಂಪರೆಯ ಮಾರ್ಗದರ್ಶನದಲ್ಲಿ ಆಧ್ಯಾತ್ಮಿಕ ಶಿಕ್ಷಣ ಪಡೆದರು. ಸುಮಾರು 44 ವರ್ಷಗಳ ಕಾಲ ಧಾರ್ಮಿಕ, ಸಾಮಾಜಿಕ ಹಾಗೂ ಆಧ್ಯಾತ್ಮಿಕ ಉಪನ್ಯಾಸಗಳ ಮೂಲಕ ಸಾವಿರಾರು ಶಿಷ್ಯರನ್ನು ರೂಪಿಸಿದರು ಎಂದು ವಿವರಿಸಿದರು.

ಕ್ರಿ.ಶ. 1398ರಲ್ಲಿ ತೈಮೂರನ ದೆಹಲಿಯ ಮೇಲಿನ ದಾಳಿಯ ಸಂದರ್ಭದಲ್ಲಿ ದಕ್ಷಿಣ ಭಾರತಕ್ಕೆ ಆಗಮಿಸಿದ ಬಂದಾನವಾಝರು, ಬಳಿಕ ಗುಲ್ಬರ್ಗಾದಲ್ಲಿ ನೆಲೆಸಿದರು. ಅವರ ಜ್ಞಾನ, ಸರಳತೆ ಮತ್ತು ಆಧ್ಯಾತ್ಮಿಕ ವ್ಯಕ್ತಿತ್ವದಿಂದ ಪ್ರಭಾವಿತರಾದ ಬಹಮನಿ ಸುಲ್ತಾನ ಫಿರೋಜ್ ಶಾ ಬಹಮನಿ ಅವರಿಗೆ ಆಶ್ರಯ ಕಲ್ಪಿಸಿದರು. ನಂತರ ಜನಸಾಮಾನ್ಯರ ಮಧ್ಯೆ ವಾಸವಿದ್ದು, ಜಾತಿ–ಮತ–ಧರ್ಮಗಳ ಭೇದವಿಲ್ಲದೆ ಮಾನವೀಯತೆಯ ಸಂದೇಶ ಸಾರಿದರು ಎಂದು ಹೇಳಿದರು.

ಸೂಫಿ ಸಾಹಿತಿ ಡಾ. ಪರ್ವಿನ್ ಸುಲ್ತಾನಾ ಮಾತನಾಡಿ, "ಬಂದಾನವಾಝ್ ಅವರ ಸಂದೇಶ ಯಾವುದೇ ಒಂದು ಧರ್ಮಕ್ಕೆ ಸೀಮಿತವಾಗಿರದೆ ಸಮಸ್ತ ಮಾನವಕುಲದ ಒಳಿತಿಗಾಗಿ ರೂಪುಗೊಂಡ ವಿಶ್ವಮಾನವೀಯ ಚಿಂತನೆಯಾಗಿದೆ. ಪ್ರೀತಿ, ಕರುಣೆ, ಸೇವೆ ಮತ್ತು ಸಹಿಷ್ಣುತೆಯ ಮೌಲ್ಯಗಳನ್ನು ಅವರು ಪ್ರತಿಪಾದಿಸಿದ್ದು, ಇಂದಿನ ಸಮಾಜಕ್ಕೂ ಅತ್ಯಂತ ಪ್ರಸ್ತುತವಾಗಿದೆ" ಎಂದರು.

ಮುಖ್ಯಅತಿಥಿ ಶರಣಗೌಡ ಪಾಟೀಲ ಪಾಳಾ ಮಾತನಾಡಿ, "ಬಸವಣ್ಣನ ಸಮಾನತೆಯ ಆಶಯವನ್ನು ಈ ಭಾಗದಲ್ಲಿ ಬಿತ್ತಿ ಬೆಳೆಸಿದವರಲ್ಲಿ ಸೂಫಿಗಳ ಪಾತ್ರ ಮಹತ್ವದ್ದಾಗಿದೆ. ಇಂದಿನ ಸಮಾಜಕ್ಕೆ ಸೂಫಿ–ಶರಣರ ಸೌಹಾರ್ದ ಬದುಕಿನ ಮೌಲ್ಯಗಳು ಅತ್ಯಗತ್ಯ" ಎಂದು ಹೇಳಿದರು.

ಡಾ. ವೀರಶೆಟ್ಟಿ ಗಾರಂಪಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾಲೇಜಿನ ಪ್ರಾಂಶುಪಾಲರಾದ ಡಾ. ಬಸವರಾಜ ಮಠಪತಿ ಅಧ್ಯಕ್ಷತೆ ವಹಿಸಿದ್ದರು. ಡಾ. ಪ್ರೇಮಾ ಅಪಚಂದ, ಡಾ. ಶರಣಬಸಪ್ಪ ವಡ್ಡನಕೇರಿ ಸೇ–ರಿದಂತೆ ಹಲವರು ಉಪಸ್ಥಿತರಿದ್ದರು.

ನಾಗೇಶ ಮಡಿವಾಳ ಕಾರ್ಯಕ್ರಮ ನಿರೂಪಿಸಿದರು. ಸಿದ್ದರಾಮ ಕಲಬುರ್ಗಿ ಸ್ವಾಗತಿಸಿದರು. ವೀಣಾ ರಾವೂರ ವಂದಿಸಿದರು.



# ಗುರು ನಾನಕ ಪಬ್ಲಿಕ್ ಶಾಲೆಯಲ್ಲಿ ಪ್ರತಿಭಾವಂತ ಮಕ್ಕಳಿಗೆ ಸನ್ಮಾನ

ಬೀದರ: ನಗರದ ನೇಹರು ಸ್ಟೇಡಿಯಂ ಹತ್ತಿರವಿರುವ ಗುರು ನಾನಕ ಪಬ್ಲಿಕ್ ಶಾಲೆಯ 2025-26ನೇ ಸಾಲಿನ 10ನೇ ಸಿಬಿಎಸ್‌ಇ ಪರೀಕ್ಷೆಯಲ್ಲಿ ಅಗ್ರಶ್ರೇಣಿಯಲ್ಲಿ ತೇರ್ಗಡೆ ಹೊಂದಿರುವ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ ಸಮಾರಂಭ ಹಮ್ಮಿಕೊಳ್ಳಲಾಗಿತ್ತು.

ಗುರು ನಾನಕ ಪಬ್ಲಿಕ್ ಶಾಲೆಗೆ ಶೇ.100 ಕ್ಕೆ 100 ಫಲಿತಾಂಶ ಬಂದಿದ್ದು ಗಮನಾರ್ಹ, ಪರೀಕ್ಷೆ ಬರೆದ ಒಟ್ಟು ವಿದ್ಯಾರ್ಥಿಗಳು 285, ಪ್ರಥಮ ದರ್ಜೆ, 161 ಅಗ್ರಶ್ರೇಣಿ, 106 ಪ್ರಥಮ ದರ್ಜೆ, 18 ದ್ವಿತೀಯ ದರ್ಜೆಯಲ್ಲಿ ಪಾಸಾಗಿ ಕೀರ್ತಿಯನ್ನು ತಂದಿದ್ದರು.

ಅಗ್ರಶ್ರೇಣಿಯಲ್ಲಿ ಪಾಸಾದ ವಿದ್ಯಾರ್ಥಿಗಳಿಗೆ ಶಾಲೆಯ ಆಡಳಿತ ಮಂಡಳಿಯಿಂದ ಸನ್ಮಾನ ಮಾಡಲಾಯಿತು ಅದರ ಜೊತೆಗೆ ಶಾಲು ಹೊದಿಸಿ ಟ್ರೋಫಿ ಮತ್ತು ಪ್ರಮಾಣ ಪತ್ರ ನೀಡಿ ಗೌರವಿಸಲಾಯಿತು.

ಡಾ. ಎಸ್. ಬಲಬೀರ ಸಿಂಗ್ ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡುತ್ತ 2026-27ನೇ ಸಾಲಿಗಾಗಿ ಹೊಸ ಅಧಿವೇಶನ ಪ್ರಾರಂಭವಾಗುತ್ತಿದೆ. ಮುಂಬರುವ 10ನೇ ತರಗತಿಯ ವಿದ್ಯಾರ್ಥಿಗಳು ಹೆಚ್ಚಿನ ಅಂಕಗಳಿಸುವ ಮೂಲಕ ಶಾಲೆಗೆ ಹಾಗೂ ಪೋಷಕರಿಗೆ ಕೀರ್ತಿ ತರಬೇಕು ಎಂದು ಕಿವಿಮಾತು ಹೇಳಿದರು. ಪ್ರತಿಭೆ ವಂಶಾವಳಿಯಿಂದ ಬರುವುದಂತಹದ್ದಲ್ಲ ಕಷ್ಟಪಟ್ಟವರಿಗೆ ಅಸಾಧ್ಯವಾದದ್ದು ಯಾವುದು ಅಲ್ಲ. ಮಕ್ಕಳು ಕಷ್ಟಪಟ್ಟು ಓದಿ ಮುಂದೆ ಸಾಗಬೇಕು ಎಂದು ವಿದ್ಯಾರ್ಥಿಗಳಿಗೆ ಕರೆ ಕೊಟ್ಟರು.

ಉಪಾಧ್ಯಕ್ಷೆ ಡಾ. ರೇಷ್ಮಾ ಕೌರ ಅವರು ಮಾತನಾಡಿ ಕಲಬುರ್ಗಿ ವಿಭಾಗದಲ್ಲಿ ಗುರು ನಾನಕ ಶಾಲೆಯು ಛಾಪು ಮೂಡಿಸಿ ಸ್ಥಾನ ಪಡೆದಿರುವುದು ಇದು ಬೀದರ ಜಿಲ್ಲೆಗೆ ಹೆಮ್ಮೆಯ ವಿಷಯವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳ ಪಾಲಕರು, ಶಾಲೆಯ ಪ್ರಾಂಶುಪಾಲೆ ನಳಿನಿ ಡಿ.ಜಿ, ಅಮಜದ ಅಲಿ, ಹನುಮಾನ ಬಿ., ಗುರು ನಾನಕ ನ್ಯೂ ಬ್ರಾಂಕ್‌ನ ಪ್ರಾಂಶುಪಾಲೆ ಅನಿತಾ, ದೇವ್ ಶಾಲೆಯ ಪ್ರಾಂಶುಪಾಲೆ ಶರ್ಲಿ ಶೀಬಾ ಮತ್ತು ಸಿಬ್ಬಂದಿ ವರ್ಗದವರು ಹಾಜರಿದ್ದರು.




# ಕಾಮಗಾರಿ ಕಳಪೆಯಾದರೆ ಶಿಸ್ತು ಕ್ರಮ

ಕಮಲನಗರ:ಮಾಜಿ ಸಚಿವರು ಹಾಗೂ ಶಾಸಕರಾದ ಪ್ರಭು ಬಿ. ಚವ್ಹಾಣ ಅವರು ಶನಿವಾರ ಇಟಗ್ಯಾಳ, ಮುತಖೇಡ, ಅಕನಾಪೂರ ಹಾಗೂ ಚಿಕ್ಲಿ. ಯು ಗ್ರಾಮಗಳಲ್ಲಿ ಸಂಚರಿಸಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದರು.

ಇಟ್ಯಾಳನಲ್ಲಿ ಇಟಗ್ಯಾಳನಿಂದ ಮಾನೂರ(ಕೆ) ವರೆಗೆ 170 ಲಕ್ಷ ಮೊತ್ತದ ಹೊಸ ರಸ್ತೆ ನಿರ್ಮಾಣ, ಮುತಖೇನಲ್ಲಿ 25 ಲಕ್ಷ ಮೊತ್ತ ಬ್ರಿಜ್ ಕಂ ಬ್ಯಾರೇಜ್ ದುರಸ್ತಿ ಹಾಗೂ ಅಕನಾಪೂರನಲ್ಲಿ 45 ಲಕ್ಷ ಮೊತ್ತದ ಸಣ್ಣ ನೀರಾವರಿ ಕೆರೆ ದುರಸ್ತಿ, ಚಿಕ್ಲಿ(ಯು)ನಲ್ಲಿ 20 ಲಕ್ಷ ಮೊತ್ತದ ಸಣ್ಣ ನೀರಾವರಿ ಕೆರೆಯ ದುರಸ್ತಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ವಿವಿಧ ಕಾಮಗಾರಿಗಳ ಕುರಿತು ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದ ಶಾಸಕರು, ಕಾಮಗಾರಿಗಳನ್ನು ಗುಣಮಟ್ಟದೊಂದಿಗೆ ಹಾಗೂ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳು ಮತ್ತು ಗುತ್ತಿಗೆದಾರರಿಗೆ ಸೂಚನೆ ನೀಡಿದರು.

ಗ್ರಾಮ ಸಂಚಾರದ ಸಂದರ್ಭದಲ್ಲಿ ಸಾರ್ವಜನಿಕರಿಂದ ಬಂದ ಬೇಡಿಕೆಗಳಿಗೆ ಸ್ಪಂದಿಸಿ ಅಗತ್ಯ ಅನುದಾನವನ್ನು ತಂದು ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಗುತ್ತಿದೆ. ಕ್ಷೇತ್ರದ ಸಮಗ್ರಅಭಿವೃದ್ಧಿಯೇ ತಮ್ಮ ಮುಖ್ಯಗುರಿಯಾಗಿದ್ದು, ಜನರ ನಿರೀಕ್ಷೆಗೆ ತಕ್ಕಂತೆ ಮೂಲಸೌಕರ್ಯಗಳನ್ನು ಕಲ್ಪಿಸಲು ಆದ್ಯತೆ ನೀಡಲಾಗುತ್ತಿದೆ ಎಂದು ತಿಳಿಸಿದರು.

ಕಾಮಗಾರಿಗಳ ಗುಣಮಟ್ಟದ ವಿಷಯದಲ್ಲಿ ಯಾವುದೇ ರಾಜಿ ಇಲ್ಲ. ನಿರ್ಮಾಣ ಕಾರ್ಯಗಳಲ್ಲಿ ಲೋಪಗಳು ಕಂಡುಬಂದಲ್ಲಿ ಅಧಿಕಾರಿಗಳು ಹಾಗೂ ಗುತ್ತಿಗೆದಾರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಗುಣಮಟ್ಟದಲ್ಲಿ ನಿರ್ಲಕ್ಷ್ಯ ತೋರಿದವರನ್ನು ಯಾವುದೇ ಕಾರಣಕ್ಕೂ ಬಿಡುವುದಿಲ್ಲ. ಹಾಗಾಗಿ ಎಚ್ಚರಿಕೆಯಿಂದ ಕೆಲಸ ಮಾಡಬೇಕೆಂದು ಹೇಳಿದರು.

ಇದೇ ವೇಳೆ ಚಿಂತಾಕಿ, ವಡಗಾಂವ ಹಾಗೂ ಚಿಕ್ಲಿ.ಯು ಗ್ರಾಮಗಳಲ್ಲಿ 2026-27ನೇ ಸಾಲಿನ ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣಾ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ರೈತರಿಗೆ ಗುಣಮಟ್ಟದ ಬಿತ್ತನೆ ಬೀಜಗಳನ್ನು ಸಕಾಲದಲ್ಲಿ ವಿತರಿಸುವ ಮೂಲಕ ಉತ್ತಮ ಬೆಳೆ ಉತ್ಪಾದನೆಗೆ ಸಹಕಾರಿಯಾಗುವಂತೆ ಕೃಷಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಮೇ.29 ರಂದು ಠಾಣಾ ಕುಶನೂರನಲ್ಲಿ ಠಾಣಾ ಕುಶನೂರನಿಂದ ನಿಡೋದಾವರೆಗೆ 86.40 ಲಕ್ಷ ಮೊತ್ತದ ರಸ್ತೆ, 30 ಲಕ್ಷದ ಸಮುದಾಯ ಭವನದ ಉಳಿದ ಕಾಮಗಾರಿ, ಚಟ್ನಾಳನಲ್ಲಿ ಚಟ್ನಾಳನಿಂದ ಚಂದರಮಹಾರಾಜ ತಾಂಡಾವರೆಗೆ 155.80 ಲಕ್ಷದ ರಸ್ತೆ, ಜೀರ್ಗಾ(ಕೆ)ನಿಂದ ಜೋಜನಾವರೆಗೆ 198.05 ಲಕ್ಷ ಮೊತ್ತದ ರಸ್ತೆ, ಬಾಚೇಪಳ್ಳಿಯಿಂದ ಬಾಚೇಪಳ್ಳಿ ಕ್ರಾವರೆಗೆ 101.60 ಲಕ್ಷದ ರಸ್ತೆ, ಮುಂಗನಾಳನಲ್ಲಿ 206.55 ಮೊತ್ತದ ರಸ್ತೆ ಕಾಮಗಾರಿ ಸೇರಿದಂತೆ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು

ಈಸಂದರ್ಭದಲ್ಲಿಮುಖಂಡರಾದಧೊಂಡಿಬಾ ನರೋಟೆ, ಶಿವಾಜಿರಾವ ಪಾಟೀಲ ಮುಂಗನಾಳ, ಸತೀಷ ಪಾಟೀಲ, ಸಚಿನ ರಾಠೋಡ, ಖಂಡೋಬಾ ಕಂಗಟೆ ಪ್ರಕಾಶ ಜೀರ್ಗೆ, ಮಲ್ಲಪ್ಪ ನೇಳಗೆ, ಪ್ರಕಾಶ ಮೇತ್ರೆ, ಬಾಲಾಜಿ ಪಾಟೀಲ, ಸೋಮನಾಥ ಆಲೂರ, ಸಂಗು ಬೋರ್ಗಿ, ಹಣಮಂತ ನೇಳಗೆ, ರವೀಂದ್ರ ರೆಡ್ಡಿ, ಜಗದೀಶ ಪಾಟೀಲ, ಈರಾರೆಡ್ಡಿ, ಶರಣು ಪಾಟೀಲ, ಅನೀಲ ನಾರಾಯಣಪೂರ, ಪ್ರಕಾಶ ಬೀರಕೂರೆ, ನಾಗಶೆಟ್ಟಿ ಗಾದಗೆ, ಗೋವಿಂದ ರೆಡ್ಡಿ, ಶರಣಪ್ಪ ಇಟಗಾ, ಧಾರಾಸಿಂಗ ರಾಠೋಡ, ಶಂಕರ, ನರಸಿಂಗ್ ಪಾಟೀಲ ಸೇರಿದಂತೆ ವಿವಿಧ ಅಧಿಕಾರಿಗಳು, ಮುಖಂಡರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಸಹೃದಯತೆ ಹೊಸಮನಿ ದೊಡ್ಡ ಗುಣ: ಸಂಜಯ ಪಾಟೀಲ



ಆಳಂದ: ವಿದ್ಯಾರ್ಥಿಗಳು, ಉಪನ್ಯಾಸಕರು ಹಾಗೂ ಸಿಬ್ಬಂದಿಗಳ ಜತೆ ಯಾವದೇ ಹಮ್ಮುಬಿಮ್ಮುಗಳು ಇಲ್ಲದೇ ಪ್ರಾಚಾರ್ಯ ಡಾ ಎಸ್ ಎಚ್ ಹೊಸಮನಿ ಅವರು ಎಲ್ಲರೊಂದಿಗೆ ಸಹೃದಯತೆಯಿಂದ ಕಾರ್ಯ ನಿರ್ವಹಣೆ ಮಾಡುವ ಕಲೆ ಇರುವ ಕಾರಣದಿಂದ ಹೆಚ್ಚು ಪ್ರೀತಿ ಗಳಿಸಿದರು ಎಂದು ಸಂಬುದ್ಧ ಪದವಿ ಕಾಲೇಜಿನ ಪ್ರಾಚಾರ್ಯ ಸಂಜಯ ಪಾಟೀಲ ತಿಳಿಸಿದರು.

ಪಟ್ಟಣದ ಎ. ವಿ. ಪಾಟೀಲ್ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಪದವಿ ಕಾಲೇಜಿನಲ್ಲಿ ಶನಿವಾರ ಪ್ರಾಚಾರ್ಯ ಡಾ ಎಸ್ ಎಚ್ ಹೊಸಮನಿ ಅವರ ವಯೋ ನಿವೃತ್ತಿ ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ವಿದ್ಯಾರ್ಥಿಸ್ನೇಹಿಯಾದ ಡಾ. ಹೊಸಮನಿ ಅವರು ಸದಾ ಕಾಲೇಜಿನ ಏಳ್ಗೆಗೆ ಶ್ರಮಿಸಿದರು,

ಅವರಲ್ಲಿನ ಉತ್ಸಾಹ, ಕ್ರೀಯಾಶೀಲತೆ ಮತ್ತು ಸಮರ್ಪಣಾ ಭಾವವು ಇತರರಿಗೆ ಮಾದರಿಯಾಗಿದೆ ಎಂದರು.

ಸನ್ಮಾನ ಸ್ವೀಕರಿಸಿ ಡಾ. ಎಸ್ ಎಚ್ ಹೊಸಮನಿ ಮಾತನಾಡಿ ಬೀದರ, ಚಿಂಚೋಳಿ, ಸುರಪೂರ ಹಾಗೂ ಆಳಂದದಲ್ಲಿನ ಪದವಿ ಕಾಲೇಜಿನಲ್ಲಿ ಸೇವೆ ಸಲ್ಲಿಸಿ, ಇಂದು ನಿವೃತ್ತಿ ಆಗುತ್ತಿರುವದು ನನಗೆ ಸಂತೃಪ್ತಿ ಇದೆ. ಜೀವನದಲ್ಲಿ ಎಂತಹ ಸವಾಲು ಎದುರಾದರೂ ಧೃತಿಗೆಡದೆ ಎಲ್ಲರ ಸಹಕಾರದಿಂದ ಯಶಸ್ಸು ಸಾಧಿಸಲು ಸಾಧ್ಯವಾಗಿದೆ. ವಿಶೇಷವಾಗಿ ವಿದ್ಯಾರ್ಥಿಗಳು, ಕುಟುಂಬ ವರ್ಗ ಮತ್ತು ಸಹ ಸಿಬ್ಬಂದಿಗಳು ಸಹಕಾರವು ನೆನಪಿಸಿಕೊಂಡು ಧನ್ಯವಾದ ಸಲ್ಲಿಸಿದರು.

ಹಿರಿಯ ಪ್ರಾಧ್ಯಾಪಕರಾದ ರಮೇಶ್ ಮಸರೋಬೋ, ಎಸ್ ಎಸ್ ಕಮ್ಮಾರ, ವೆಂಕಟೇಶ್ ಪೂಜಾರಿ, ಮಮತಾಕುಮಾರಿ, ಸಂಗೀತಾ ಅಷ್ಟಗಿ, ಹಣಮಂತರಾಯ, ಗೌತಮ ಚಿಂಚೋಳಿ, ಪ್ರಮೋದ ಕಡಗಂಚಿ, ಬಸವರಾಜ ಶೃಂಗೇರಿ ಮಾತನಾಡಿ ಡಾ. ಎಸ್.ಎಚ್. ಹೊಸಮನಿ ಅವರಲ್ಲಿನ ಸ್ನೇಹ ಗುಣ, ಕಾರ್ಯದಕ್ಷತೆ, ಸಹನೆ, ಸಹಕಾರ ಮನೋಭಾವದ ಅನುಭವಗಳೊಂದಿಗೆ ಅವರ ಒಡನಾಟದ ನೆನಪುಗಳು ಬಿಚ್ಚಿಟ್ಟರು.ರೇಣುಕಾ ಎಸ್ ಹೊಸಮನಿ, ಶ್ರೀನಿಧಿ ಹೊಸಮನಿ, ಸುದೀಪ್ ಹೊಸಮನಿ, ಹಿರಿಯ ಪ್ರಾಧ್ಯಾಪಕ ರಾಜಶೇಖರ ಬಾಬನೂರೆ, ಟೀಕಪ್ಪ, ಜೈ ಪ್ರಕಾಶ ಬಾವಿಮನಿ, ಬಸವರಾಜ ಪಾಟೀಲ, ಸತೀಶ ಪಾಟೀಲ, ಸಿದ್ದರಾಮ ಮಾಶಾಳ, ಬಬ್ರುವಾಹನ, ಇಕ್ಬಾಲ್ ಖಾನ್,ಬಸಮ್ಮ ಪಾಟೀಲ, ಡಾ.ಸುಖದೇವಿ ಘಂಟೆ ನಿಜಾಮೊದ್ದೀನ್, ದಿನೇಶ ಪಾಟೀಲ ಉಪಸ್ಥಿತರಿದ್ದರು.

ನಂತರ ಕಾಲೇಜು ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಮತ್ತು ಬಂಧುಮಿತ್ರರು ಡಾ. ಹೊಸಮನಿ ದಂಪತಿಗಳಿಗೆ ಸನ್ಮಾನಿಸಿ ಶುಭಕೋರಿದರು.

# ಡಿಸಿಎಂ ಹುದ್ದೆ ಸೃಷ್ಟಿ ನಿರ್ಧಾರವಾಗಿಲ್ಲ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿಕೆ



ಕಲಬುರಗಿ: ರಾಜ್ಯದಲ್ಲಿ ಉಪಮುಖ್ಯಮಂತ್ರಿ ಸ್ಥಾನಗಳನ್ನು ಸೃಷ್ಟಿಸುವ ಬಗ್ಗೆ ಯಾವುದೇ ನಿರ್ಧಾರಗಳನ್ನು ಸದ್ಯಕ್ಕೆ ಕೈಗೊಂಡಿಲ್ಲ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ.

ಕಲ್ಬುರ್ಗಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎರಡು ಹಂತಗಳಲ್ಲಿ ಸಂಪುಟ ವಿಸ್ತರಣೆ ನಡೆಯಲಿದೆ. ಉಪಮುಖ್ಯಮಂತ್ರಿ ಹುದ್ದೆಗಳ ಸೃಜನೆ ಸಂಬಂಧ ಯಾವುದೇ ಅಧಿಕೃತ ಪ್ರಸ್ತಾವನೆ ಬಂದಿಲ್ಲ. ಜೂನ್ 3 ರ ನಂತರ ಈ ಬಗ್ಗೆ ತೀರ್ಮಾನ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದರು.

ನೂತನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಜತೆಗೆ ಮೊದಲ ಹಂತದಲ್ಲಿ ಎಷ್ಟು ಸಚಿವರು ಪ್ರಮಾಣ ವಚನ ಸ್ವೀಕರಿಸಬೇಕು ಎಂಬುದು ಇನ್ನೆರಡು ದಿನಗಳಲ್ಲಿ ಎಲ್ಲವೂ ಅಂತಿಮಗೊಳ್ಳಲಿದೆ ಎಂದರು.

ಮೊದಲ ಹಂತದ ಸಂಪುಟ ವಿಸ್ತರಣೆ ಮುಗಿದ ಬಳಿಕ 15 ದಿನಗಳ ಒಳಗೆ 2ನೇ ಹಂತದ ಸಂಪುಟ ವಿಸ್ತರಣೆಯಾಗಲಿದೆ. ಪೂರ್ಣ ಪ್ರಮಾಣದ ಸಚಿವ ಸಂಪುಟ ಅಸ್ತಿತ್ವಕ್ಕೆ ಬರಲಿದೆ ಎಂದು ಅವರು ಹೇಳಿದರು.

ಒಂದು ವೇಳೆ ಡಿಸಿಎಂ ಹುದ್ದೆಗೆ ಸಂಬಂಧಿಸಿದಂತೆ ಪ್ರಸ್ತಾವನೆಗಳು ಬಂದರೆ ಎಷ್ಟು ಜನರನ್ನು ಉಪಮುಖ್ಯಮಂತ್ರಿಗಳನ್ನಾಗಿಸಬೇಕು ಎಂಬ ಬಗ್ಗೆ ಇನ್ನು ತೀರ್ಮಾನವಾಗಿಲ್ಲವಾದರೂ ಪಕ್ಷದ ಆಂತರಿಕ ವಲಯದಲ್ಲಿ ಚರ್ಚೆಗಳಾಗಿವೆ. ಜೂನ್ 3 ರ ನಂತರ ಸ್ಪಷ್ಟ ಚಿತ್ರಣ ಸಿಗಲಿದೆ ಎಂದರು.ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಬಗ್ಗೆ ಪ್ರತಿಕ್ರಿಯಿಸಿದ ಅವರು, ಹೊಸ ಮುಖ್ಯಮಂತ್ರಿ ಬಳಿಕ ಸಹಜವಾಗಿಯೇ ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಪ್ರಕ್ರಿಯೆಯು ನಡೆಯುತ್ತದೆ. ಅಧಿಕಾರ ಹಂಚಿಕೆಯ ಭಾಗವಾಗಿ ಕೆಪಿಸಿಸಿಗೂ ಹೊಸ ಅಧ್ಯಕ್ಷರ ನೇಮಕವಾಗುತ್ತಾರೆ. ಸರ್ಕಾರದ ಸುಗಮ ಆಡಳಿತಕ್ಕಾಗಿ ಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷರ ನಡುವೆ ಉತ್ತಮ ಹೊಂದಾಣಿಕೆ ಅವಶ್ಯವಿದೆ ಎಂದರು.

ಮುಖ್ಯಮಂತ್ರಿ ಮತ್ತು ಸಚಿವರುಗಳು ಜೊತೆಗೆ ಹೊಂದಾಣಿಯಿಂದ ಹೋಗುವಂತಹ ಹಾಗೂ ಪಕ್ಷ ಸಂಘಟನೆಗೆ ಶಕ್ತಿ ಇರುವ ತಳಮಟ್ಟದಲ್ಲಿ ವ್ಯಾಪಕ ಜನ ಬೆಂಬಲ ಹೊಂದಿರುವವರನ್ನು ಮುಂದಿನ ಕೆಪಿಸಿಸಿ ಅಧ್ಯಕ್ಷರನ್ನಾಗಿ ನೇಮಕ ಮಾಡುವ ಬಗ್ಗೆಯೂ ಚರ್ಚೆಗಳು ನಡೆದಿವೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ತಿಳಿಸಿದರು. ಶಾಸಕರಾದ ಅಲ್ಲಮಪ್ರಭು ಪಾಟೀಲ, ಜಗದೇವ ಗುತ್ತೇದಾರ, ತಿಪ್ಪಣ್ಣಪ್ಪ ಕಮಕನೂರ ಸೇರಿದಂತೆ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಪಟ್ಟಣಕ್ಕೆ ಶುದ್ಧ ಕುಡಿಯುವ ನೀರು ಸರಬರಾಜು ಮಾಡುವಂತೆ ಮಹ್ಮದ್ ಇಬ್ರಾಹಿಂ ಆಗ್ರಹ



ಚಿತ್ತಾಪುರ :ಪಟ್ಟಣದ ಪುರಸಭೆ ವ್ಯಾಪ್ತಿಯ 23 ವಾರ್ಡಗಳಿಗೆ ದಿನನಿತ್ಯ ಶುದ್ಧವಾದ ಕುಡಿಯುವ ನೀರು ಸರಬರಾಜು ಮಾಡಬೇಕು ಎಂದು ಹೊಂಗೀರಣ ತಾಲೂಕು ಹಿರಿಯ ನಾಗರಿಕ, ನಾಗರಿಕಿಯರ ಹಾಗೂ ವಯೋವೃದ್ಧರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಮಹ್ಮದ್ ಇಬ್ರಾಹಿಂ ಆಗ್ರಹಿಸಿದರು.

ಜಿಲ್ಲಾಧಿಕಾರಿಗೆ ಬೆರದ ಮನವಿ ಪತ್ರವನ್ನು ತಹಶೀಲ್ದಾರ್ ನಾಗಯ್ಯ ಹಿರೇಮಠ ಅವರಿಗೆ ಸಲ್ಲಿಸಿ ಮಾತನಾಡಿದ ಅವರು, ಚಿತ್ತಾಪುರ ಪಟ್ಟಣಕ್ಕೆ ಕಳೆದ ವರ್ಷದಿಂದ ಶುದ್ಧವಾದ ಕುಡಿಯುವ ನೀರು ಸಮರ್ಪಕವಾಗಿ ಸರಬರಾಜು ಆಗುತ್ತಿಲ್ಲ ಹಾಗೂ ದಿನ ಬಿಟ್ಟು ದಿನ ನೀರು ಬಿಡಲಾಗುತ್ತಿದೆ. ಬಿಟ್ಟರು ಬರೀ 20 ರಿಂದ 30 ನಿಮಿಷಗಳು ಮಾತ್ರ, ಹಾಗೂ ಸಮಯಕ್ಕೆ ಸರಿಯಾಗಿ ನೀರು ಬೀಡದೆ ತಮ್ಮ ಮನಸ್ಸಿಗೆ ಬಂದಂತೆ ಬಿಡುತ್ತಾರೆ ಇದರಿಂದ ನೀರಿಗಾಗಿ ಸಾರ್ವಜನಿಕರು ಪರದಾಡುತ್ತಿದ್ದಾರೆ ಎಂದು ಹೇಳಿದರು.

ಚಿತ್ತಾಪುರ ಪಟ್ಟಣಕ್ಕೆ ಶುದ್ಧವಾದ ಕುಡಿಯುವ ನೀರು ಸರಬರಾಜು ಮಾಡುತ್ತೇವೆ ಎಂದು ಹೇಳಿದ ಪುರಸಭೆಯವರು ಅಶುದ್ಧ ನೀರು ಸರಬರಾಜು ಮಾಡುತ್ತಿದ್ದಾರೆ. ಇದರಿಂದ ಪಟ್ಟಣದಲ್ಲಿ ವಾಂತಿ ಭೇದಿಯಂತಹ ಸಾಂಕ್ರಮಿಕ ರೋಗಗಳಿಗೆ ಜನರು ತುತ್ತಾಗುತ್ತಿದ್ದಾರೆ ಇಷ್ಟಾದರೂ ಸಂಬಂಧಪಟ್ಟ ಇಲಾಖೆಯವರು ಗಮನ ಹರಿಸುತ್ತಿಲ್ಲ ಎಂದು ಆರೋಪಿಸಿದರು.

ವಾರ್ಡ್ ಸಂಕ್ಯೆ 2ರ ವ್ಯಾಪ್ತಿಯ ಕಾಶಿ ಗಲ್ಲಿಯಲ್ಲಿ ನಿಗದಿತ ಸಮಯಕ್ಕೆ ನೀರು ಬರುತ್ತಿಲ್ಲ, ಈ ಕುರಿತು ಹಲವು ಬಾರಿ ಪುರಸಭೆ ಅಧಿಕಾರಿಗಳ ಗಮನಕ್ಕೆ ತಂದರು ಯಾವುದೆ ಪ್ರಯೋಜನವಾಗಿಲ್ಲ. ಅಲ್ಲದೆ ಅಧಿಕಾರಿಗಳಿಗೆ ಫೋನ್ ಕಾಲ್ ಮಾಡಿದಾಗ ಕಾಲ್ ರಿಸೀವ್ ಮಾಡುತ್ತಿಲ್ಲ ಹಾಗೂ ಅಧಿಕಾರಿಗಳು ಒಬ್ಬರ ಮೇಲೊಬ್ಬರು ಹಾಕುತ್ತಾ ಬೇಜವಾಬ್ದಾರಿತನದಿಂದ ವರ್ತಿಸುತ್ತಿದ್ದಾರೆ. ಈಗಾಗಲೇ ಬೇಸಿಗೆ ಕಾಲ ಮುಗಿಯುತ್ತಿದ್ದರೂ ಜನರಿಗೆ ಮಾತ್ರ ಕುಡಿಯುವ ನೀರಿನ ಭಾಗ್ಯ ಕಲ್ಪಸುವಲ್ಲಿ ಪುರಸಭೆ ಅಧಿಕಾರಿಗಳು ವಿಫಲರಾಗಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.ಕೂಡಲೇ ಬೇಜವಾಬ್ದಾರಿ ಅಧಿಕಾರಿಗಳ ಮೇಲೆ ಶಿಸ್ತಿನ ಕ್ರಮ ಕೈಗೊಂಡು ಚಿತ್ತಾಪುರ ಪಟ್ಟಣಕ್ಕೆ ಶುದ್ಧವಾದ ಕುಡಿಯುವ ನೀರು ಸರಬರಾಜು ಮಾಡುವ ಕ್ರಮ ಕೈಗೊಳ್ಳಬೇಕು ಎಂದು ಮಹ್ಮದ್ ಇಬ್ರಾಹಿಂ ಒತ್ತಾಯಿಸಿದರು. ಮನವಿ ಪತ್ರ ಸ್ವೀಕರಿಸಿದ ತಹಶೀಲ್ದಾರ್ ನಾಗಯ್ಯ ಹಿರೇಮಠ ಮಾತನಾಡಿ, ಕೂಡಲೇ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಡಿಎಸ್‌ಎಸ್ ಮುಖಂಡ ದೇವೇಂದ್ರ ಕುಮಸಿ, ಮಲ್ಲಿನಾಥ ಪಾಟೀಲ, ಸಿದ್ರಾಮ ಕಾಶಿ, ಮಹೇಮೂದ ಸಾಬ್, ಮಲ್ಲಿಕಾರ್ಜುನ ಮುಗುಳಕರ್, ಚಂದ್ರಕಾಂತ ಕಾಶಿ, ಕಲ್ಯಾಣಪ್ಪ ಪೂಜಾರಿ, ಅಂಬಾದಾಸ ಟೇಲರ್ ಸೇರಿದಂತೆ ಇತರರು ಇದ್ದರು.

# ಯಶಸ್ವಿಯಾಗಿ ಜರುಗಿದ ರೋಟರಿ ಸಿಲ್ವರ್ ಸ್ಟಾರ್ ರೈಸ್ ಕಲ್ಯಾಣ ಕರ್ನಾಟಕ ಉದ್ಯೋಗ ಮೇಳ

ಬೀದರ್: ಕಲ್ಯಾಣ ಕರ್ನಾಟಕದಲ್ಲಿ ಟ್ಯಾಲೆಂಟ್‌ಗಳಿಗೆ ಕೊರತೆ ಇಲ್ಲಾ, ಆದರೆ ನಾಯಕತ್ವದ ಕೊರತೆ ಇದೆ ಇದಕ್ಕೆ ಮುಖ್ಯ ಕಾರಣ ನಾವು ಕಲ್ಯಾಣ ಕರ್ನಾಟಕದ ನಾಯಕತ್ವವನ್ನು ಕೆಲವು ಕುಟುಂಬಕ್ಕೆ ಅಡ ಇಟ್ಟಿರುವುದು ಎಂದು ಬೆಂಗಳೂರು ದಕ್ಷಿಣ ಲೋಕಸಭಾ ಸಂಸದ ತೇಜಸ್ವಿ ಸೂರ್ಯ ಅಭಿಪ್ರಾಯಪಟ್ಟರು.

ನಗರದ ಹೈದ್ರಾಬಾದ್ ಕರ್ನಾಟಕ ಶಿಕ್ಷಣ ಮಂಡಳಿಯ ಬಿ.ವಿ.ಭೂಮರೆಡ್ಡಿ ಕಾಲೇಜು ಆವರಣದಲ್ಲಿ ರೋಟರಿ ಕ್ಲಬ್ ಬೀದರ್ ಸಿಲ್ವರ್ ಸ್ಟಾರ್ ವತಿಯಿಂದ ರೈಸ್ ಕಲ್ಯಾಣ ಕರ್ನಾಟಕ ಉದ್ಯೋಗ ಮೇಳವನ್ನು ಉದ್ದೇಶಿಸಿ ವರ್ಚುವಲ್ ಮುಖಾಂತರ ಮಾತನಾಡಿ, ನಮ್ಮ ರಾಜ್ಯದಲ್ಲಿ ವಾರ್ಷಿಕವಾಗಿ ಸಾಮಾನ್ಯ ಕನ್ನಡಿಗ 3 ಲಕ್ಷ ದುಡಿದರೆ, ಕಲ್ಯಾಣ ಕರ್ನಾಟಕ ಭಾಗದ ಸಾಮಾನ್ಯ ಜನ ಕೇವಲ 1 ಲಕ್ಷ ಮಾತ್ರ ದುಡಿಯುತ್ತಾನೆ. ಇದಕ್ಕೆ ಮುಖ್ಯ ಕಾರಣ ಇಲ್ಲಿನ ಶಿಕ್ಷಣ, ಕಲ್ಯಾಣ ಕರ್ನಾಟಕ ಭಾಗದಲ್ಲಿ ಸುಮಾರು 25 ಸಾವಿರ ಶಿಕ್ಷಕರ ಕೊರತೆ ಇದೆ. ಇಂತಹ ಸಮಸ್ಯೆಗಳನ್ನ ಸರಿಪಡಿಸಿದಾಗ ಮಾತ್ರ ನಾವು ಈ ವ್ಯತ್ಯಾಸವನ್ನು ಸರಿದೂಗಿಸಬಹುದು.

ಇತ್ತೀಚಿಗೆ ಕೇಂದ್ರ ಸರ್ಕಾರದ ಕೆಲವು ಯೋಜನೆಗಳಿಂದ ಈ ಅಸಮಾನತೆ ಸರಿದೂಗುತ್ತಿದೆ. ದಶಕಗಳಿಂದ ಅಭಿವೃದ್ಧಿ ಎಂದರೆ ಕೇವಲ ಬೆಂಗಳೂರಿಗೆ ಸೀಮಿತವಾಗಿದೆ ಆದರೆ ಅದು ಹೋಗಲಾಡಬೇಕು, ಬೆಂಗಳೂರಿಗೆ ಬರುವಂತಹ ಅಭಿವೃದ್ಧಿ ಕೆಲಸಗಳು ಕಲ್ಯಾಣ ಕರ್ನಾಟಕಕ್ಕೆ ಬಂದಾಗ ಮಾತ್ರ ನಿಜವಾದ ಅಭಿವೃದ್ಧಿ ಆಗುತ್ತದೆ ಎಂದರು.

ರೋಟರಿ ಕ್ಲಬ್ ಬೀದರ್ ಸಿಲ್ವರ್ ಸ್ಟಾರ್ ಅಧ್ಯಕ್ಷ ಆದಿಶ್ ವಾಲಿ ಮಾತನಾಡಿ, ಬೀದರ್ ಜಿಲ್ಲೆಯಲ್ಲಿ ಪ್ರಥಮ ಬಾರಿಗೆ ಇಂತಹ ಒಂದು ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ನಾನು ಈ ಹಿಂದೆ ಲಂಡನ್‌ನಲ್ಲಿ ಓದುವಾದ ಈ ರೀತಿ ಯೂತ್ ಸಮೀಟ್ ಹಮ್ಮಿಕೊಂಡಿದ್ದೆವು, ಅದೇರೀತಿ ನಮ್ಮ ಕಲ್ಯಾಣ ಕರ್ನಾಟಕದಲ್ಲಿಯೂ ಸಹ ಇಂತಹ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಇಲ್ಲಿ ಬಂದಿರುವ ಸುಮಾರು 50ಕ್ಕೂ ಅಧಿಕ ಕಂಪನಿಗಳಲ್ಲಿ ಸಾವಿರಾರು ಉದ್ಯೋಗಿಗಳ ಅವಶ್ಯಕತೆಯಿದ್ದು ಉದ್ಯೋಗ ಆಕಾಂಕ್ಷಿಗಳು ತಮ್ಮ ಉದ್ಯೋಗವನ್ನು ಪಡೆಯುವ ಮೂಲಕ ಕಲ್ಯಾಣ ಕರ್ನಾಟಕವನ್ನ ಹಿಂದುಳಿದ ಜಿಲ್ಲೆಯ ಹಣೆಪಟ್ಟಿಯಿಂದ ಮುಕ್ತಗೊಳಿಸಲು ನೀವೆಲ್ಲ ಕಾರಣೀಭೂತರಾಗಬೇಕು ಎಂದು ತಿಳಿಸಿದರು.

ಕಲ್ಯಾಣ ಕರ್ನಾಟಕ ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ಶರಣು ಪಪ್ಪಾ ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗದ ಹಿಂದುಳಿದ ಜಿಲ್ಲೆಗಳಲ್ಲಿ ಒಂದಾದ ಬೀದರ್ ಜಿಲ್ಲೆಯನ್ನ ಅಭಿವೃದ್ಧಿಯತ್ತ ಕೊಂಡೊಯ್ಯಲು ವಾಲಿ ಪರಿವಾರ ಕಳೆದ 2,3 ದಶಕಗಳಿಂದ ಕೆಲಸ ಮಾಡುತ್ತಿದೆ, ಅವರ ತಂದೆಯವರ ಮಾರ್ಗದರ್ಶನದಲ್ಲಿ ಇವತ್ತು ಆದಿಶ್ ವಾಲಿ ಅವರು ಇವತ್ತು ಕಲ್ಯಾಣ ಕರ್ನಾಟಕ




ಭಾಗದ ನಿರುದ್ಯೋಗಿ ಯುವಕರಿಗೆ ಉದ್ಯೋಗ ಕೊಡಿಸಲು ಹೊರಟಿರುವುದು ನಿಜಕ್ಕೂ ಶ್ಲಾಘನೀಯ. ನಮ್ಮ ಕಲ್ಯಾಣ ಕರ್ನಾಟಕ ಭಾಗದ ಯುವಕರು ತಾವು ಮಾನಸಿಕವಾಗಿ ನಾವು ಹಿಂದುಳಿದಿದ್ದೀವಿ ಎಂಬ ತಪ್ಪು ಕಲ್ಪನೆಯಲ್ಲಿದ್ದಾರೆ ಆದರೆ ಆ ತಪ್ಪು ಕಲ್ಪನೆ ನಮ್ಮ ತಲೆಯಿಂದ ತೆಗೆದು ಹಾಕುವ ಕೆಲಸವನ್ನು ನಾವು ಮಾಡೋಣ. ನಾವು ಮನಸ್ಸು ಮಾಡಿದರೆ ಏನನ್ನಾದರೂ ಕೂಡಾ ಸಾಧಿಸಬಹುದು ಎಂದು ಹೇಳಿದರು.

ಬಸವರಾಜ ಧನ್ನೂರ ಮಾತನಾಡಿ, ನಾನು ಕಳೆದ 20 ವರ್ಷಗಳಿಂದ ರೋಟರಿಯಲ್ಲಿ ಕೆಲಸ ಮಾಡುತ್ತಿದ್ದೇನೆ ಆದರೆ ನಾವು ಯಾವತ್ತೂ ಉದ್ಯೋಗ ಮೇಳವನ್ನು ಹಮ್ಮಿಕೊಂಡಿದಿಲ್ಲ ಆದಿಶ್ ವಾಲಿ ಅವರು ಈ ಪ್ರಯತ್ನ ಮಾಡಿದ್ದಕ್ಕೆ ನಾನು ಅವರಿಗೆ ಮೊದಲಿಗೆ ಧನ್ಯವಾದಗಳನ್ನು ತಿಳಿಸುತ್ತೇನೆ. ಕೇವಲ ಉದ್ಯೋಗ ಮೇಳ ಅಷ್ಟೇ ಅಲ್ಲದೆ ಬೀದರ್ ಜಿಲ್ಲೆಯ ಗ್ರಾಮೀಣ ಭಾಗದ 50 ಜನ ಬಡ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ 2 ವರ್ಷಗಳ ಪಿಯೂ ಶಿಕ್ಷಣವನ್ನು ಕೊಡಲು ಕೂಡಾ ಆದಿಶ್ ವಾಲಿ ನೇತೃತ್ವದ ರೋಟರಿ ಸಿಲ್ವರ್ ಸ್ಟಾರ್ ಹೊರಟಿದೆ ಎಂದರು.

ಸಂಪನ್ಮೂಲವ್ಯಕ್ತಿಯಾಗಿಆಗಮಿಸಿದ್ದಮೊಟೊಕ್ರಾಸ್ ಸಂಸ್ಥಾಪಕ ಕರಣ್ ಜಾವಲಿ ಮಾತನಾಡಿ, ನೀವು ಯಾವುದೇ ಕ್ಷೇತ್ರದಲ್ಲಿ ಮುಂದುವರೆಯಬೇಕಾದರೂ ನಮಗೆ ಮುಖ್ಯವಾಗಿ ಬೇಕಾದದ್ದು ಸಂಭಾಷಣೆ, ಹಾಗಾಗಿ ಪ್ರತಿಯೊಬ್ಬರು ತಮ್ಮ ಸಂಭಾಷಣೆ ಹಾಗೂ ಸಂಹವನದ ಬಗ್ಗೆ ಗಮನ ಹರಿಸಬೇಕು.

ಪ್ರತಿಯೊಬ್ಬರು ಒಂದು ಸ್ವಂತ ಉದ್ಯಮವನ್ನ ಪ್ರಾರಂಭ ಮಾಡಬೇಕಾದರೆ ಮೊದಲು ಒಂದು ಐಡಿಯಾ ಇರಬೇಕು. ಈ ವೈಜ್ಞಾನಿಕ ಯುಗದಲ್ಲಿ ನೀವು ನಿಮ್ಮ ತಲೆಯಲ್ಲಿ ಸ್ಪಷ್ಟವಾದ ಐಡಿಯಾ ಹೊಂದಿದ್ದರೆ ಸಾಕು ೦ಖ ನಿಮಗೆ ಹೇಗೆ ಮುಂದುವರೆಯಬೇಕು ಎಂಬುದನ್ನು ಸಹ ಹೇಳಿಕೊಡುತ್ತದೆ.

ಜೀವನದಲ್ಲಿ ಯಶಸ್ಸು ಗಳಿಸಬೇಕಾದರೆ ಗುರು ಮತ್ತು ಗುರಿ ಹೊಂದಬೇಕು, ಗುರು ಎಷ್ಟು ಜನರು ಬೇಕಾದರೂ ಇರಲಿ ಆದರೆ ಗುರಿ ಒಂದೇ ಆಗಿರಬೇಕು. ನಾನು ಬಸವಣ್ಣನವರ ಕಾಯಕವೇ ಕೈಲಾಸ ಎಂಬ ವಿಚಾರಗಳನ್ನು ನಂಬಿ ಬದುಕುತ್ತಿದ್ದೇನೆ ಎಂದು ತಿಳಿಸಿದರು.

ಖ್ಯಾತ ಉದ್ಯಮಿ ಕ್ಷಿತೀಜಾ ಏರೋಳಕರ್ ಮಾತನಾಡಿ, ನಮ್ಮ ಭಾಗದಲ್ಲಿನ ವಿದ್ಯಾರ್ಥಿಗಳಲ್ಲಿ ಮೋಟಿವೇಶನ್ ಹಾಗೂ ಇನ್ನೋವೇಶನ್ ಎರಡರ ಕೊರತೆ ಕೂಡಾ ಇದೆ. ವಿದ್ಯಾರ್ಹತೆ ಇದೆ ಆದರೆ ಸ್ಕಿಲ್ ಕೊರತೆಯಿಂದ ಆ ವಿದ್ಯಾರ್ಹತೆ ವ್ಯರ್ಥವಾಗುತ್ತಿದೆ.

ಆದ್ದರಿಂದ ಯುವಕರು ಬೀದರ್ ಜಿಲ್ಲೆಗೆ ಮಾತ್ರ ಸೀಮಿತವಾಗದೆ, ಬೇರೆ ಬೇರೆ ರಾಜ್ಯ ಹಾಗೂ ಪ್ರದೇಶಗಳಿಗೆ ತೆರಳಿ ಅಲ್ಲಿ ಸ್ಕಿಲ್ ಕಲಿತು ಇಲ್ಲಿ ಬಂದು ಉದ್ಯಮ ಪ್ರಾರಂಭಿಸಿದರೆ ನೀವು ಕಂಡಿತಾ ಯಶಸ್ಸು ಕಾಣ್ತೀರಾ ಎಂದರು.

# ಅಹಿಲ್ಯಾಬಾಯಿ ಆಡಳಿತದ ಕಾಲ ಸುವರ್ಣ ಯುಗ : ಯತ್ನಾಳ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದಲ್ಲಿ ಸಂಗೊಳ್ಳಿ ರಾಯಣ್ಣ ಅವರ ಕಂಚಿನ ಮೂರ್ತಿಯನ್ನು ಪ್ರತಿಷ್ಠಾಪಿಸಿ, ರಾಜ್ಯದಲ್ಲಿಯೇ ದಾಖಲೆ ಆಗುವ ರೀತಿಯಲ್ಲಿ ಜನಸ್ತೋಮ ಸೇರಿ ಅನಾವರಣ ಮಾಡಲಾಗುವುದು ಎಂದು ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರು ಭರವಸೆ ನೀಡಿದರು.

ನಗರದ ಅಹಿಲ್ಯಾಬಾಯಿ ಹೋಳ್ಕರ್ ವೃತ್ತದಲ್ಲಿ ರವಿವಾರ ರಾಜಮಾತಾ ಅಹಿಲ್ಯಾಬಾಯಿ ಹೋಳ್ಕರ್ ಜಯಂತ್ಯುತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ಈಗಾಗಲೇ ನಗರದಲ್ಲಿ ಮಹಾರಾಷ್ಟ್ರಕ್ಕೆ ಸೀಮಿತವಾಗಿದ್ದ ಹಿಂದೂ ಧರ್ಮ ರಕ್ಷಕಿ ಅಹಿಲ್ಯಾಬಾಯಿ ಹೋಳ್ಕರ್ ಅವರ ಇತಿಹಾಸ ರಾಜ್ಯದಲ್ಲಿಯೂ ಪ್ರಚುರಪಡಿಸಲು ಅವರ ವೃತ್ತ ಸೇರಿದಂತೆ ಅನೇಕ ಮಹಾಪುರುಷರ, ಸ್ವಾತಂತ್ರ್ಯ ಹೋರಾಟಗಾರರ, ನಾಡಿಗಾಗಿ ಸೇವೆ ಸಲ್ಲಿಸಿದ ಮಹನೀಯರ ವೃತ್ತಗಳ ಸ್ಥಾಪನೆ, ರಸ್ತೆಗಳಿಗೆ ಹೆಸರು ನಾಮಕರಣ ಮಾಡಲಾಗಿದೆ. ರಾಯಣ್ಣನವರ ಮೂರ್ತಿ ಬಾಕಿಯಿದ್ದು, 2027ರ ಅಗಸ್ಟ್ 15 ರಂದು ಅದನ್ನೂ ಮಾಡುವುದಾಗಿ ತಿಳಿಸಿದರು.

ಭಾರತದ ಇತಿಹಾಸದಲ್ಲಿ ರಾಜಮಾತಾ ಅಹಿಲ್ಯಾಬಾಯಿ ಹೋಳ್ಕರ್ ಅವರು ನಡೆಸಿದ 35 ವರ್ಷಗಳ ಸುಧೀರ್ಘ ಆಡಳಿತ ಕಾಲವನ್ನು ಸುವರ್ಣ ಯುಗ ಎಂದು ಕರೆಯಲಾಗುತ್ತದೆ. ಅಹಿಲ್ಯಾಬಾಯಿ ಅವರು ಸಮರ್ಥ ಆಡಳಿತಗಾರರಾಗಿದ್ದರು. ಮಹಿಳಾ ಸಬಲೀಕರಣಕ್ಕೆ ಒತ್ತು ನೀಡಿ, ಮಹಿಳಾ ಸೈನ್ಯವನ್ನು ಕಟ್ಟಿದರು. ಕೃಷಿ, ವ್ಯಾಪಾರ ಮತ್ತು ಶಿಕ್ಷಣಕ್ಕೆ ಪ್ರೋತ್ಸಾಹ ನೀಡುತ್ತಿದ್ದರು. ಉತ್ತಮ ಆಡಳಿತ, ದೇವಸ್ಥಾನಗಳ ಜೀರ್ಣೋದ್ಧಾರ ಮತ್ತು ಸಾಮಾಜಿಕ ಕಾರ್ಯಗಳಿಗೆ ಪ್ರಸಿದ್ಧರಾಗಿದ್ದರು. ಅವರ ಜನಪರ ಹಾಗೂ ದೈವಿಕ ಕಾರ್ಯಗಳನ್ನು ಪರಿಗಣಿಸಿ 'ಲೋಕಮಾತಾ' ಎಂದು ಗೌರವದಿಂದ ಕರೆಯಲಾಗುತ್ತದೆ ಎಂದು ತಿಳಿಸಿದರು.

ಇದೇ ವೇಳೆ ಅನೇಕ ಸಮುದಾಯದ ಮುಖಂಡರನ್ನು ಸನ್ಮಾನಿಸಲಾಯಿತು. ಮಹಾನಗರ ಪಾಲಿಕೆ ಸದಸ್ಯರಾದ ರಾಜಶೇಖರ ಕುರಿಯವರು ನೇತೃತ್ವ ವಹಿಸಿದ್ದರು.

ಮಹಾನಗರ ಪಾಲಿಕೆ ಮೇಯರ್ ಎಂ.ಎಸ್. ಕರಡಿ, ಸದಸ್ಯರಾದ ಪ್ರೇಮಾನಂದ ಬಿರಾದಾರ, ಜವಾಹರ ಗೋಸಾವಿ, ರಾಹುಲ್ ಜಾಧವ, ಮಾಜಿ ಉಪಮೇಯರ್ ರಾಜೇಶ ದೇವಗಿರಿ, ಮುಖಂಡರಾದ ಅಶೋಕ ಬೆಲ್ಲದ, ರಮೇಶ ಪಡಸಲಗಿ, ರಮೇಶ ವೀರಕರ, ಸೋಮು ರಣದೇವಿ, ರಾಜಶೇಖರ ಭಜಂತ್ರಿ, ನಾಗರಾಜ ಮುಳವಾಡ, ಶಂಕರ ಬಾಡಗಂಡಿ, ಮಾಂತೇಶ ಒಣರೊಟ್ಟಿ, ಗಿರೀಶ ಕೆಳಗಡೆ ಸೇರಿದಂತೆ ಹಿತೈಷಿಗಳು, ಕಾರ್ಯಕರ್ತರು, ಅಭಿಮಾನಿಗಳು ಹಾಗೂ ಅಹಿಲ್ಯಾಬಾಯಿ ಹೋಳ್ಕರ್ ಮಹಿಳೆಯರು ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಗುರು-ಶಿಷ್ಯರದು ಜಗದ ಶ್ರೇಷ್ಠ ಸಂಬಂಧ :ಮರುಳಾರಾಧ್ಯ ಶ್ರೀ

■ ಉದಯರಶ್ಮಿ ದಿನಪತ್ರಿಕೆ

ಬೂದಿಹಾಳ ಡೋಣ(ದೇವರಹಿಪ್ಪರಗಿ): ಗುರು ಮತ್ತು ಶಿಷ್ಯರ ಸಂಬಂಧ ಜಗತ್ತಿನ ಶ್ರೇಷ್ಠ ಹಾಗೂ ದೊಡ್ಡ ಸಂಬಂಧವಾಗಿದೆ ಎಂದು ದೇವೂರ ಹಿರೇಮಠದ ಮರುಳಾರಾಧ್ಯ ಶಿವಾಚಾರ್ಯರು ಹೇಳಿದರು.

ತಾಲ್ಲೂಕಿನ ಬೂದಿಹಾಳ ಡೋಣ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಭಾನುವಾರ ಜರುಗಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿ, ವಿದ್ಯಾರ್ಥಿನೀಯರ ಗುರುವಂದನಾ ಹಾಗೂ ಅಭಿನಂದನಾ ಸಮಾರಂಭದ ಸಾನಿಧ್ಯ ವಹಿಸಿ ಮಾತನಾಡಿದರು.

ಜಗತ್ತಿನಲ್ಲಿ ಗುರುವಿಗೆ ಉನ್ನತ ಸ್ಥಾನವಿದೆ. ಇಲ್ಲಿ ಗುರು ಶಿಷ್ಯರ ಸ್ನೇಹ ಸಂಬಂಧ ಅತ್ಯಂತ ಪವಿತ್ರವಾದದು ಎಂದರು.

ಕೆರೂಟಗಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮುಖ್ಯಶಿಕ್ಷಕ ಎಸ್.ಎಸ್.ಸಾತಿಹಾಳ ಮಾತನಾಡಿ, ಅಕ್ಷರಜ್ಞಾನ ನೀಡಿದ ಗುರುಗಳ ಉಪಕಾರವನ್ನು ಸ್ಮರಿಸುವ ಮೂಲಕ ಗುರುವಂದನಾ ಕಾರ್ಯಕ್ರಮ ಜರುಗುತ್ತಿರುವು ಅತ್ಯಂತ ಶ್ಲಾಘನೀಯ ಎಂದರು.



ಶಿಕ್ಷಕರಾದ ಜಿ.ಬಿ.ಹೊಕ್ಕುಂಡಿ, ಶೇಖಸಾಬ್ ಪಾನಪರೋಶ, ಎನ್.ಎಸ್.ಸಜ್ಜನ, ಪಿ.ಸಿ.ತಳಕೇರಿ, ಆರ್.ಜಿ.ಬನಸಿ, ಬಿ.ಎಂ.ಕಠಾರೆ, ಶಿವನಗೌಡ ಪಾಟೀಲ, ವಿ.ಎಸ್.ಅಗ್ನಿ, ಪಿ.ಎಸ್.ಓತಿಹಾಳ, ಎಸ್. ಎಸ್.ಇನಾಮದಾರ, ಜಿ.ಎ.ಪಾಟೀಲ, ಎಂ.ಎನ್. ಮಯೂರ, ಪಿ.ಆಯ್.ಕಾಳೆ, ಶಕುಂತಲಾ ಗುಬ್ಬೇವಾಡ ಮಾತನಾಡಿದರು. ಎಸ್‌ಡಿಎಮ್‌ಸಿ ಅಧ್ಯಕ್ಷ ಗುರುಬಾಳಯ್ಯ ಹಿರೇಮಠ ಅಧ್ಯಕ್ಷತೆ ವಹಿಸಿದ್ದರು. ಭೂದಾನಿ ದಿ.ಬಸವಂತ್ರಾಯಗೌಡ ಬಿರಾದಾರ ಹಾಗೂ ಎಸ್‌ಡಿ-ಎಮ್‌ಸಿ ಮಾಜಿಅಧ್ಯಕ್ಷ ದಿ.ಗುರಣ್ಣ ಸಾವಳಗಿ ಅವರಿಗೆ ಗೌರವ ಸಮರ್ಪಣೆ ಜರುಗಿತು.

ಪ್ರಕಾಶ ಪಾಟೀಲ, ಮಹಾದೇವ ಸತ್ಯಪ್ಪಗೋಳ, ಮಹಾಂತೇಶ ಬಿರಾದಾರ, ಭೀರಲಿಂಗ ಪೂಜೇರಿ, ಈರಣ್ಣ ಇಜೇರಿ, ಅನೀಲ ಬಿರಾದಾರ, ಮಂಜುನಾಥ ಸಾವಳಗಿ, ನಾನಾಗೌಡ ಬಿರಾದಾರ, ಶಿವರಾಜ ತಾಳಿಕೋಟಿ, ಸುಧಾಕರ ಬಿರಾದಾರ, ಈರಣ್ಣ ಬಡಿಗೇರ, ಅಂಬರೀಷ್ ಮಸಬಿನಾಳ, ನಾಗೇಶ ದೇವತಗಲ್ ಸೇರಿದಂತೆ ಇತರರು ಇದ್ದರು.

# ವಿದ್ಯಾರ್ಥಿಗಳ ಜವಾಬ್ದಾರಿ ಮತ್ತಷ್ಟು ಹೆಚ್ಚಿಸುವ ಪ್ರತಿಭಾ ಪುರಸ್ಕಾರ

## ದೇವರ ಹಿಪ್ಪರಗಿ ಶಾಸಕ ಭೀಮನಗೌಡ (ರಾಜುಗೌಡ) ಪಾಟೀಲ ಅಭಿಮತ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಪ್ರತಿಯೊಂದು ಮಗುವಿನಲ್ಲಿ ಒಂದೊಂದು ಪ್ರತಿಭೆ ಇರುತ್ತದೆ. ಮಕ್ಕಳಲ್ಲಿರುವ ಪ್ರತಿಭೆಯನ್ನು ಪೋಷಕರು ಹಾಗೂ ಶಿಕ್ಷಕರು ಗುರುತಿಸಿ ಪ್ರೋತ್ಸಾಹಿಸಬೇಕು. ಆಗ ಇನ್ನಷ್ಟು ಸಾಧನೆ ಮಾಡಲು ಸಹಕಾರಿಯಾಗಲಿದೆ ಎಂದು ದೇವರ ಹಿಪ್ಪರಗಿ ಶಾಸಕ ಭೀಮನಗೌಡ (ರಾಜುಗೌಡ) ಪಾಟೀಲ ಹೇಳಿದರು.

ಸಿಂದಗಿ ನಗರದ ಆಶೀರ್ವಾದ ಕಲ್ಯಾಣ ಮಂಟಪದಲ್ಲಿ ಅಖಂಡ ಸಿಂದಗಿ ತಾಲೂಕು ಲಿಂಗಾಯತ ಪಂಚಮಸಾಲಿ ಸಮಾಜ ವತಿಯಿಂದ ಹಮ್ಮಿಕೊಂಡ 2025-2 ನೇ ಸಾಲಿನ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಮಾಜದ ಮಕ್ಕಳು ಉತ್ತಮ ವಿದ್ಯಾಭ್ಯಾಸ ಪಡೆದು ಸಮಾಜದ ಏಳಿಗೆಯಲ್ಲಿ ಮಹತ್ವದ ಪಾತ್ರ ವಹಿಸಬೇಕು. ತಂದೆ-ತಾಯಿ ಹಾಗೂ ಗುರುಹಿರಿಯರಿಗೆ ಗೌರವ ನೀಡುವ ಸಂಸ್ಕೃತಿಯನ್ನು ಬೆಳೆಸಿಕೊಳ್ಳಬೇಕು. ಪ್ರತಿಭಾ ಪುರಸ್ಕಾರಗಳು ವಿದ್ಯಾರ್ಥಿಗಳ ಜವಾಬ್ದಾರಿಯನ್ನು ಮತ್ತಷ್ಟು ಹೆಚ್ಚಿಸುತ್ತವೆ ಎಂದರು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳನ್ನು ನಾಗರತ್ನ ಅಶೋಕ ಮನಗೂಳಿ ಸನ್ಮಾನಿಸಿದ ಬಳಿಕ ಮಾತನಾಡಿದ ಅವರು, ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಮತ್ತು ಉನ್ನತ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ನೀಡುವುದು ಕಾರ್ಯಕ್ರಮದ ಉದ್ದೇಶವಾಗಿದೆ. ಮಕ್ಕಳಿಗೆ ಕೇವಲ ಹೆಚ್ಚು ಅಂಕಗಳಿಸುವ ಶಿಕ್ಷಣ ನೀಡಿದರೇ ಸಾಲದು, ಅವ-ರಿಗೆ ಒಳ್ಳೆಯ ಸಂಸ್ಕಾರ, ಮಾನವೀಯ ಮೌಲ್ಯಗಳನ್ನು ಕಲಿಸುವುದರ ಜೊತೆಗೆ ಅವರಲ್ಲಿರುವ ಕೌಶಲ್ಯ ಗುರುತಿಸಿ, ಪ್ರೋತ್ಸಾಹಿಸಿದಾಗ ಸಾಧಕರಾಗಿ ಹೊರಹೊಮ್ಮಲು ಸಾಧ್ಯ ಎಂದರು.



ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ಕೂಡಲಸಂಗಮ ಲಿಂಗಾಯತ ಪಂಚಮಸಾಲಿ ಪೀಠದ ಬಸವಜಯ ಮೃತ್ಯುಂಜಯ ಮಹಾಸ್ವಾಮಿಗಳು ಮಾತನಾಡಿ, ಸಮಾಜದ 2ಎ ಮೀಸಲಾತಿ ಸಿಗುವವರೆಗೂ ನಮ್ಮ ಹೋರಾಟ ನಿಲ್ಲುವುದಿಲ್ಲ. ಒಂದು ವೇಳೆ ಎಲ್ಲರ ಪ್ರಯತ್ನದಿಂದ ಸಮಾಜಕ್ಕೆ 2ಎ ಮೀಸಲಾತಿ ಸಿಕ್ಕರೆ ಮುಂದಿನ ಪೀಳಿಗೆಗೆ ಅನುಕೂಲವಾಗುತ್ತದೆ. ತಾಲೂಕು ಘಟಕವು ಪ್ರತಿ ವರ್ಷವೂ ಇಂಹತ ಸಮಾವೇಶಗಳನ್ನು ಮಾಡಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಸಮ್ಮುಖವನ್ನು ಆಸಂಗಿಹಾಳ ಶ್ರೀಮಠದ ಶಂಕರಾನಂದ ಮಹಾರಾಜರು ವಹಿಸಿದ್ದರು. ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಲಿಂಗಾಯತ ಪಂಚಮಸಾಲಿ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಡಾ.ಸವಿತಾ ಝಳಕಿ, ಪುರಸಭೆಯ ಮಾಜಿ ಅಧ್ಯಕ್ಷ ಶಾಂತವೀರ ಬಿರಾದಾರ, ತಾಲೂಕು ಪಂಚಮಸಾಲಿ ಸಮಾಜದ ಅಧ್ಯಕ್ಷ ಮಲ್ಲಿಕಾರ್ಜುನ ಹಂಗರಗಿ, ಅಶೋಕ ಕೊಳಾರಿ, ಚಂದ್ರಶೇಖರ ನಾಗರಬೆಟ್ಟ, ಕುಮಾರ ದೇಸಾಯಿ, ಸಂಗನಗೌಡ ಪಾಟೀಲ ಅಗಸಬಾಳ, ಮಲ್ಲನಗೌಡ ಪಾಟೀಲ ಇಬ್ರಾಹಿಂಪೂರ, ಶಿವಾನಂದ ಬಡಾನೂರ, ವಿಶ್ವನಾಥ ಕುರಡಿ, ಬಸವರಾಜ ಐರೋಡಗಿ, ಕಾಳಪ್ಪ ಬಗಲಿ, ಪ್ರಧಾನ ಕಾರ್ಯದರ್ಶಿ ಆನಂದ ಶಾಬಾದಿ ಸೇ-ರಿದಂತೆ ಇತರರು ಇದ್ದರು. ಪಂಚಮಸಾಲಿ ನೌಕರರ ಸಂಘದ ಅಧ್ಯಕ್ಷ ಮಹಾಂತೇಶ ಯಡ್ರಾಮಿ ಪ್ರಾಸ್ತಾವಿಕ ಮಾತನಾಡಿದರು.

# ಶ್ರೀ ಬಿ.ಎಂ.ಪಾಟೀಲ ಪಬ್ಲಿಕ್ ಶಾಲೆಯಲ್ಲಿ ಶೈಕ್ಷಣಿಕ ವರ್ಷದ ಪ್ರಾರಂಭೋತ್ಸವ




■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಪ್ರತಿಷ್ಟಿತ ಬಿ.ಎಲ್.ಡಿ.ಇ ಸಂಸ್ಥೆಯ ಶ್ರೀ ಬಿ. ಎಂ. ಪಾಟೀಲ ಪಬ್ಲಿಕ್(ಸಿಬಿ-ಎಸ್‌ಇ) ಶಾಲೆಯಲ್ಲಿ ಸೋಮವಾರ ಶೈಕ್ಷಣಿಕ ವರ್ಷದ ಪ್ರಾರಂಭೋತ್ಸವ ಅದ್ದೂರಿಯಾಗಿ ನಡೆಯಿತು.ಮಕ್ಕಳು ಶಾಲಾ ವಾಹನದಿಂದ ಕೆಳಗಿಳಿಯುತ್ತಿದ್ದಂತೆಯೇ ಅವರನ್ನು ಬೋಧಕರು ಮತ್ತು ಬೋಧಕರ ಹೊರತಾದ ಸಿಬ್ಬಂದಿ ವೈಭವದಿಂದ ಸ್ವಾಗತಿಸಿ, ಪ್ರತಿ ಮಗುವಿಗೂ ಶುಭಾಶಯ ಪತ್ರವನ್ನು ನೀಡಿ ಕರತಾಡನದ ಮೂಲಕ ಎಲ್ಲರನ್ನು ಬರಮಾಡಿಕೊಂಡರು. ಈ ವೇಳೆ ಎಲ್ಲ ತರಗತಿಗಳನ್ನು ಆಕರ್ಷಕವಾಗಿ ಅಲಂಕಾರ ಮಾಡಲಾಗಿತ್ತು.

ಪ್ರಾರ್ಥನಾ ಸಭೆಯ ವೇದಿಕೆಯಲ್ಲಿ ಸರಸ್ವತಿ ಪೂಜೆ ನೆರವೇರಿಸಿದ ಹಿರಿಯ ಕಾರ್ಯ ಸಂಂ-ಯೋಜಕಿ ದೀಪಾ ಜಂಬೂರೆ ಮತ್ತು ನೂತನ ಉಪಪ್ರಾಚಾರ್ಯೆ ವಸುಧಾ ನಾರ್ವೆಕರ್ ಅವರು ಮಕ್ಕಳಿಂದ ದೀಪ ಹಚ್ಚಿಸುವ ಮೂಲಕ ಹೊಸ ಶೈಕ್ಷಣಿಕ ವರ್ಷಕ್ಕೆ ಅದ್ದೂರಿಯ ಚಾಲನೆ ನೀಡಿದರು.

ಸಂಗೀತ ಶೀಕ್ಷಕಿ ಸಂತೋಷಿ ಕುಸೂರ ಸರಸ್ವತಿ ಭಜನೆಯನ್ನು ಹಾಡಿದರು. ಸಾಂಸ್ಕೃತಿಕ ಕಾರ್ಯ ಸಂಯೋಜಕಿ ಫರಾ ಜಾಗಿರದಾರ ಸ್ವಾಗತಿಸಿದರು. ಶಾಲೆಗೆ ಹೊಸದಾಗಿ ಆಗಮಿಸಿದ ಪ್ರತಿ ಶಿಕ್ಷಕರನ್ನು ವಿಶೇಷ ರೀತಿಯಲ್ಲಿ ಪರಿಚಯಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ನೂತನ ಉಪಪ್ರಾಚಾರ್ಯೆ ವಸುಧಾ ನಾರ್ವೇಕರ, ಮುಂದಿನ ಶೈಕ್ಷಣಿಕ ಕಾರ್ಯ ಚಟುವಟಿಕೆಗಳು, ಶಾಲೆಯಲ್ಲಿ ಶಿಸ್ತು ಕಾಯ್ದುಕೊಳ್ಳುವುದರ ಕುರಿತು ಮಾತನಾಡಿದರು.

ಆಂಗ್ಲ ಭಾಷಾ ಮುಖ್ಯಸ್ಥ ವಿಠ್ಠಲ ಬಜೇ-ರಿಯವರ ವಂದಿಸಿದರು.

# ಶಿಕ್ಷಕನ ನಿಜವಾದ ಧರ್ಮ ಜಾತಿಯಲ್ಲ ಶಿಕ್ಷಣ : ಪೂಜಾರಿ



■ ಉದಯರಶ್ಮಿ ದಿನಪತ್ರಿಕೆ

ತಿಕೋಟಾ: 2004-05 ನೇ ಸಾಲಿನ ಎಸ್. ಎಸ್. ಎಲ್. ಸಿ ವಿದ್ಯಾರ್ಥಿಗಳಿಂದ ಗುರು ನಮನ ಹಾಗೂ ಸ್ನೇಹ ಸಂಗಮ ಕಾರ್ಯಕ್ರಮ ಸರಕಾರಿ ಪ್ರೌಢ ಶಾಲೆ ಬಾಬಾನಗರದಲ್ಲಿ ನಡೆಯಿತು.

ಮುಖ್ಯ ಅತಿಥಿಗಳಾಗಿ ನಿವೃತ್ತ ಮುಖ್ಯೋಪಾಧ್ಯಾಯ ಎಸ್.ಎಲ್. ಇಂಗಳೇಶ್ವರ ಮಾತನಾಡಿ ಮಕ್ಕಳ ಸರ್ವತೋಮುಖ ಬೆಳವಣಿಗೆಯೆ ಶಿಕ್ಷಕರ ಆಶಯ ಆಗಿರುತ್ತದೆ ಎಂದರು. ಉಪನ್ಯಾಸ ಸಿ. ಎಸ್. ಪೂಜಾರಿ ಮಾತನಾಡಿ ಮಕ್ಕಳ ಪ್ರೀತಿ,ವಿಶ್ವಾಸ ನೋಡಿ ಶಿಕ್ಷಕನಾಗಿರುವುದು ಸಾರ್ಥಕವಾಯಿತು. ಶಿಕ್ಷಕನ ನಿಜವಾದ ಧರ್ಮ ಜಾತಿಯಲ್ಲ ಶಿಕ್ಷಣ ಎಂದರು.

ಮುಖ್ಯೋಪಾದ್ಯಾಯ ಎಸ್. ಬಿ. ಬಿರಾದಾರ ಮಾತನಾಡಿದರು. ವಾಣಿಜ್ಯ ತೆರಿಗೆ ಅಧಿಕಾರಿಗ ಸಿ. ಎಸ್. ಹಡಪದ, ಮುಖ್ಯೋಪಾಧ್ಯಾಯ ಸಿ .ಆರ್. ಝುಂಡೆ, ಕಮಲಾ ಹಂಡಿ ಮಾತನಾಡಿದರು. ಅಕಾಲಿಕ ನಿಧನ ಹೊಂದಿದ ಶಿಕ್ಷಕರಿಗೆ ಮೌನ ಆಚರಿಸಿ ಸ್ಮರಿಸಲಾಯಿತು. ಎಲ್ಲರನ್ನು ಸನ್ಮಾನಿಸಿ, ಸ್ಮರಣಿಕೆ ನೀಡಿ ಗೌರವಿಸಲಾಯಿತು.

ಸಾನಿಧ್ಯವನ್ನು ಬಾಬಾನಗರ ಹಿರೇಮಠದ ರಾಚಯ್ಯ ಹಿರೇಮಠ ವಹಿಸಿದ್ದರು. ಅಧ್ಯಕ್ಷತೆಯನ್ನು ಬಿ.ಜಿ ಸಜ್ಜನ್ ವಹಿಸಿದ್ದರು. ಎಸ್. ಜಿ. ಪುಕಾಳೆ, ಎನ್. ಸಿ. ಶರ್ಮಾ,ಎನ್. ಎ.ಸ್ ಜೊಳ್ಳಿ , ಎಚ್. ಎಲ್. ಪಾಂಡುಗೋಳ, ಗೀತಾ ಪಾಟೀಲ, ಜಿ. ಎಸ್. ಭಜಂತ್ರಿ , ಡಿ. ಎಲ್. ಪಿಂಜಾರ, ಕೆ. ಬಿ. ಶಿರಗೂರ, ಜಿ. ಎಸ್. ಬಿರಾದಾರ ಎಲ್ಲ ಶಿಕ್ಷಕರು ಉಪಸ್ಥಿತರಿದ್ದರು.

ಅಪ್ಪಾಸಾಹೇಬ ಭಜಂತ್ರಿ ಪ್ರಾಸ್ತಾವಿಕ ಮಾತನಾಡಿದರು. ಶಿಕ್ಷಕಿ ಪವಿತ್ರಾ ಲೋಣಿ ಕಾರ್ಯಕ್ರಮ ನಿರೂಪಿಸಿದರು. ಸವಿತಾ ಬಿರಾದಾರ ಸ್ವಾಗತಿಸಿದರು. ಜ್ಯೋತಿ ಪಾಟೀಲ ಪ್ರಾರ್ಥನೆ ಹೇಳಿದರು, ವೀರಭದ್ರ ಸಾವಳಗಿ ವಂದಿಸಿದರು.

# ಸಂಗೀತದ ರಸ ಋಷಿಗಳು ಜನ್ಮತಾಳಿದ ತಾಳಿಕೋಟೆ : ಸಾಲಿಮಠ

■ ಉದಯರಶ್ಮಿ ದಿನಪತ್ರಿಕೆ

ತಾಳಿಕೋಟೆ: 1944 ರಲ್ಲಿ ಪಂಚಾಕ್ಷರಿ ಗವಾಯಿಗಳು ಚಕ್ಕಡಿಯಲ್ಲಿಯೇ ಸಂಚಾರಿ ಸಂಗೀತ ಸೇವಾ ಕಾರ್ಯಕ್ರಮವನ್ನು ನಡೆಸುತ್ತಾ ಚಕ್ಕಡಿಯಲ್ಲಿ ತಂಬೂರಿ, ತಬಲಾ ಸಂಗೀತ ನಾದಕ್ಕೆ ತಕ್ಕಂತಿರುವ ಈ ಎಲ್ಲ ಸಲಕರಣೆಗಳನ್ನಿಟ್ಟುಕೊಂಡು ಗ್ರಾಮಾಂತರ ಪ್ರದೇಶದಲ್ಲಿ ಸಂಚರಿಸುತ್ತಾ ಸಾಗಿದ ಸಂಗೀತ ಪ್ರೇಮಿಗಳು ಸಂಗೀತ ನಾದವನ್ನು ಕೇಳಿ ದೌಡಾಯಿಸಿ ಆ ಕಾರ್ಯಕ್ರಮವನ್ನು ವೀಕ್ಷಿಸಲು ಈ ಹಿಂದೆ ಆಗಮಿಸುವ ಕಾರ್ಯವೂ ಸಹ ನಡೆಯುತ್ತಿತ್ತೆಂದು ಖ್ಯಾತ ಗವಾಯಿಗಳಾದ ಬಿ.ಎಸ್. ಸಾಲಿಮಠ ಅವರ ಪುತ್ರ ನಿವೃತ್ತ ಕ್ಷೇತ್ರ ಶಿಕ್ಷಣಾಧಿಕಾರಿ ಕಾಶೀನಾಥ ಪಿ ಸಾಲಿಮಠ ಅವರು ನುಡಿದರು.

ರವಿವಾರರಂದು ಎ.ಎಸ್. ವಠಾರ ಸಾಂಸ್ಕೃತಿ-ಕ ಕಲಾ ಸಂಘದ ವತಿಯಿಂದ ಬಸವ ಸಮೀತಿಯ ಪ್ರಣಾಂಗಳದಲ್ಲಿ ಏರ್ಪಡಿಸಲಾದ ಪಿ.ಎ. ಸಾಲಿಮಠ ಗವಾಯಿಗಳ 22 ನೇಯ ಹಾಗೂ ಶ್ರೀ ಎ.ಎಸ್. ವಠಾರ ಗುರುಗಳ 8 ನೇ ಸ್ಮರಣೋತ್ಸವ ಅಂಗವಾಗಿ ಏರ್ಪಡಿಸಲಾದ ಸಂಗೀತ ಕಾರ್ಯಕ್ರಮವನ್ನು ಉದ್ಘಾಟಿಸಿ, ಸನ್ಮಾನ ಸ್ವೀಕರಿಸಿ ಮಾತನಾಡುತ್ತಿದ್ದ ಅವರು, ಬಿ.ಎಸ್. ಸಾಲಿಮಠ ಗುರುಗಳು ಪಂಚಾಕ್ಷರಿ ಗವಾಯಿಗಳೊಂದಿಗೆ ಅವರೂ ಕೂಡಾ ಸಂಗೀತದ ಸಂಚಾರಿ ಚಕ್ಕಡಿಯಲ್ಲಿ ಕುಳಿತು ಸಂಗೀತ ಸೇವೆ ನೀಡಿದವರಾಗಿದ್ದಾರೆ. ಬಿ.ಎಸ್. ಸಾಲಿಮಠ ನಮ್ಮ ತಂದೆಯುವರಾಗಿದ್ದು ಎ.ಎಸ್. ವಠಾರ ಸರ್ ಅವರು ಸಹ ನಮ್ಮ ತಂದೆಯ ಶಿಷ್ಯರಾಗಿ ಸಂಗೀತ ಕ್ಷೇತ್ರದಲ್ಲಿ ಪರಿಣಿತರಾಗಿ ಸಂಗೀತದ ರಸ ಋಷಿಗಳಾಗಿ ಹೆಸರು ಗಳಿಸಿದ್ದಾರೆಂದರು. ತಾಳಿಕೋಟೆಯಲ್ಲಿ ಎಸ್.ಕೆ. ಹೈಸ್ಕೂಲ್ ನ್ನು ಪ್ರಾರಂಭಿಸಿ ಶ್ರೀ ಖಾಸ್ಗತೇಶ್ವರ ಮಠದ ಶಿವಬಸವದೇವರು ನಮ್ಮ ತಂದೆ ಸಾಲಿಮಠ ಅವರು ವಿರೇಶ್ವರ ಪುಣ್ಯಾಶ್ರಮದಲ್ಲಿ ಇದ್ದುದ್ದನ್ನು ಲಕ್ಷಿಸಿ ಅವರನ್ನು ತಾಳಿಕೋಟೆಗೆ ಕರೆತಂದು ಸಂಗೀತ ಶಿಕ್ಷಕರಾಗಿ ನೇಮಕ ಮಾಡಿಕೊಂಡರು. ಅಂದು ಸರ್ಕಾರದ ಯಾವ ಸೌಲತ್ತು ಇಲ್ಲದಿದ್ದರೂ 1954 ನೇ ಸಾಲಿನಲ್ಲಿ ಸಂಗೀತ ಶಾಲೆಯನ್ನು ಪ್ರಾರಂಭಿಸಿದ ಶಿವಬಸವದೇವರು ಸಂಗೀತಕ್ಕೆ ಅಗತ್ಯವಿದ್ದ ಎಲ್ಲ ಸಲಕರಣೆಗಳನ್ನು ತಂದು ಚಿತ್ತರಗಿ ಗಂಗಾಧರ ಶಾಸ್ತ್ರಿಗಳ ನಾಟಕ ಕಂಪನಿಯವ-




ರಿಂದ ಸಹಾಯ ಸೌಲತ್ತು ಪಡೆದು ಮುನ್ನಡೆದ ಈ ಸಂಗೀತ ಶಾಲೆಯಲ್ಲಿ ಸುಮಾರು 7-8 ಸಾವಿರಕ್ಕೂ ಮೇಲ್ಪಟ್ಟು ಜನತೆ ಸಂಗೀತ ಕಲಿತು ಉನ್ನತ ಹುದ್ದೆಯಲ್ಲಿ ಸೇವಾ ಕಾರ್ಯ ಮುಂದುವರೆಸಿದ್ದಾರೆಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಹಿರಿಯ ಪತ್ರಕರ್ತ ಜಿ.ಟಿ. ಘೋರ್ಪಡೆ ಅವರು ಮಾತನಾಡಿ, ಹಿರಿಯ ಗವಾಯಿಗಳಾದ ಪಿ.ಎ. ಸಾಲಿಮಠ ಹಾಗೂ ಎ. ಎಸ್. ವಠಾರ ಗುರುಗಳ ಆತ್ಮೀಯ ಸಂಬಂಧ 1963 ನೇ ಸಾಲಿನಲ್ಲಿಯೇ ನನಗೆ ದೊರೆತಿತ್ತು. ಆ ಸಾಲಿನಲ್ಲಿ ನಾನು 8 ನೇ ತರಗತಿಯಲ್ಲಿ ಓದುತ್ತಿದ್ದೆ. ಸಂಗೀತವನ್ನು ಕಲಿಯಲು ಸಹ ನನಗೂ ಕೂಡಾ ಅಂದು ಅನುಕೂಲವಾಯಿತು ಎಂದರು.

ಶಿಕ್ಷಕ ರಮೇಶ ಯರಕ್ಯಾಳ ಪ್ರಾಸ್ತಾವಿಕ ಮಾತನಾಡಿದರು.

ಇದೇ ಸಮಯದಲ್ಲಿ ಶಿಕ್ಷಕಿ ವಿಶಾಲಾಕ್ಷಿ ಬಡಿಗೇರ ಹಾಗೂ ಕುಮಾರಿ ಶ್ರೇಯಾ ಪೂಜಾರಿ, ಚೈತ್ರಾ ಕುಬಸದ, ಅಶ್ವಿನಿ ಬಡಿಗೇರ, ಅನುಷಾ ಕೊಡಗಾನೂರ, ಅಕ್ಷತಾ ಬಿರಾದಾರ, ಅಶ್ವಿನಿ ವಂದಲಿ, ಕುಮಾರಿ ಯಾಳಗಿ, ಅಲ್ಲದೇ ಖ್ಯಾತ ಗವಾಯಿಗಳಾದ ರಾಜ್ಯಪ್ರಶಸ್ತಿ ಪುರಸ್ಕೃತರಾದ ಬಸವರಾಜ ಭಂಟನೂರ ಹಾಗೂ ತಬಲಾ ಸಾಥಿ ಯಮನೇಶ ಶಾಸ್ತ್ರಿ ಅವರು ಶಾಸ್ತ್ರೀಯ ಹಾಗೂ ಭಾವಗೀತೆಗಳನ್ನು ಹಾಡಿ ಜನರ ಮನಸ್ಸನ್ನು ತಣಿಸಿದರು.

ವೇದಿಕೆಯ ಮೇಲೆ ಗವಾಯಿಗಳಾದ ಮಲ್ಲಿಕಾರ್ಜುನ ಭಜಂತ್ರಿ ಅವರು ಅಧ್ಯಕ್ಷತೆ ವಹಿಸಿದ್ದರು.

ಜಯಸಿಂಗ್ ಮೂಲಿಮನಿ, ವಾಸುದೇವ ಹೆಬಸೂರ, ಆಮಯ್ಯ ಹಿರೇಮಠ, ಪತ್ರಕರ್ತ ಬಸವರಾಜ ಕಟ್ಟಿಮನಿ, ಮಹಾಂತಯ್ಯ ಸಾಲಿಮಠ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು.

ಕಾರ್ಯಕ್ರಮದ ಮೊದಲಿಗೆ ಗವಾಯಿ ಸಾಲಿಮಠ ಅವರ ಹಾಗೂ ವಠಾರ ಅವರ ಭಾವಚಿತ್ರಗಳಿಗೆ ಪುಷ್ಪ ನಮನ ಸಲ್ಲಿಸಲಾಯಿತು.

ಈ ಕಾರ್ಯಕ್ರಮದ ನೇತೃತ್ವವನ್ನು ಗವಾಯಿ ದೀಪಕಸಿಂಗ್ ಹಜೇರಿ, ಗೋವಿಂದಸಿಂಗ್ ಹಜೇರಿ ವಹಿಸಿದ್ದರು.

ಈಶ್ವರ ಬಡಿಗೇರ, ಬಸಣ್ಣ ಗುರಿಕಾರ, ರಾಜು ಗುಬ್ಬೇವಾಡ, ಸುರೇಶ ಹೂಗಾರ, ಅಶೋಕ ರಾಜನಕೋಳೂರ, ಚಿಂತಾಮಣಿ ಸಾಲವಾಡಗಿ, ಗುಂಡಣ್ಣ ಹಂದಿಗನೂರ, ಯಲ್ಲಪ್ಪ ಗುಂಡನಳ್ಳಿ, ಪ್ರಶಾಂತ ಮುದ್ದೇಬಿಹಾಳ, ಮಲ್ಲಿಕಾರ್ಜುನ ನಾವಿ, ಆಮಯ್ಯ ಹಿರೇಮಠ ಮೊದಲಾದವರು ಉಪಸ್ತಿತರಿದ್ದರು.

# ಕಲಾವಿದರ ಪ್ರತಿಭೆಗೆ ಪ್ರೋತ್ಸಾಹವೇ ಯಶಸ್ಸಿನ ಮೆಟ್ಟಿಲು :ವಿಜಯಕುಮಾರ ಸೋನಾರೆ

ಬೀದರ್ :ಜಿಲ್ಲೆಯಲ್ಲಿರುವ ಪ್ರತಿಭಾವಂತ ಕಲಾವಿದರನ್ನು ಒಂದೇ ವೇದಿಕೆಯಲ್ಲಿ ನೋಡುವುದು ಸಂತಸದ ವಿಷಯವಾಗಿದೆ. ಜಿಲ್ಲೆಯ ಕಲಾವಿದರಲ್ಲಿ ಅಪಾರ ಪ್ರತಿಭೆ ಅಡಗಿದ್ದು, ಅವರಿಗೆ ರಾಜ್ಯ ಹಾಗೂ ರಾಷ್ಟ್ರಮಟ್ಟದ ವೇದಿಕೆಗಳು ಇನ್ನಷ್ಟು ದೊರೆಯಬೇಕಾದ ಅಗತ್ಯವಿದೆ ಎಂದು ಕರ್ನಾಟಕ ಜಾನಪದ ಆಕಾಡೆಮಿ ಸದಸ್ಯ ವಿಜಯಕುಮಾರ ಸೋನಾರೆ ಹೇಳಿದರು. ರವಿವಾರ ಬೆಳಿಗ್ಗೆ ನಗರದ ಪೂಜ್ಯ ಚನ್ನಬಸವ ಪಟ್ಟದೇವರು ಜಿಲ್ಲಾ ರಂಗಮಂದಿರದಲ್ಲಿ ಪ್ರಗತಿ ಸಂಗೀತ ಕಲಾ ಸಂಸ್ಥೆ (ರಿ), ಬೀದರ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೀದರ ಇವರ ಸಹಯೋಗದಲ್ಲಿ 2025-26ನೇ ಸಾಲಿನ ವಿಶೇಷ ಘಟಕ ಯೋಜನೆಯಡಿ ಸಂಘ-ಸಂಸ್ಥೆಗಳಿಗೆ ನೀಡಲಾಗುವ ಧನಸಹಾಯ ಯೋಜನೆಚುಡಿಯಲ್ಲಿ "ಸಂಗೀತ ಸೌರಭ ಸಾಂಸ್ಕೃತಿಕ ಕಾರ್ಯಕ್ರಮವು" ನಡೆದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಗ್ರಾಮೀಣ ಭಾಗಗಳಲ್ಲಿಯೂ ಅನೇಕ ಕಲಾವಿದರು ತಮ್ಮ ವಿಶಿಷ್ಟಪ್ರತಿಭೆಯ ಮೂಲಕ ಜನಮನ ಗೆಲ್ಲುತ್ತಿದ್ದಾರೆ. ಆದರೆ ಅವ-ರಿಗೆ ಸೂಕ್ತ ಅವಕಾಶಗಳು ಮತ್ತು ಪ್ರೊತ್ಸಾಹದ ಕೊರತೆಯಿಂದಾಗಿ ಅವರ ಪ್ರತಿಭೆ ವ್ಯಾಪಕವಾಗಿ ಹೊರಹೊಮ್ಮಲು ಸಾಧ್ಯವಾಗುತ್ತಿಲ್ಲ. ಸರ್ಕಾರ ಹಾಗೂ ಸಾಂಸ್ಕೃತಿಕ ಸಂಸ್ಥೆಗಳು ಇಂತಹ ಕಲಾವಿದರಿಗೆ ಹೆಚ್ಚಿನ ಅವಕಾಶಗಳನ್ನು ಕಲ್ಪಿಸಬೇಕು ಎಂದು ಆಗ್ರಹಿಸಿದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR